ಸಂಪುಟ : 8 ಸಂಚಿಕೆ : 272 ಪುಟ : 4 ಬೆಲೆ : 3.00 ಶುಕ್ರವಾರ ಡಿಸೆಂಬರ್ 8, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 272 Pages : 4 Price : 3.00 Friday December 8, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 8 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 31, 32 ದಾಸರ ಓಣಿ, ಭಜಂತ್ರಿ ಓಣಿ, ಸಿಕ್ಕಲಿಗಾರ ಓಣಿ, ಲಕ್ಷ್ಮಿ ಗುಡಿ, ಎಲ್ಲಮ್ಮನ ಗುಡಿ, ತ್ರಿಕೋಟೇಶ್ವರ ಗುಡಿ ಲೈನ್, ಝುಂಡಾ ಕಟ್ಟಿ, ಹಳೆ ಕಚೇರಿ ರೋಡ್, ಮುಳಗುಂದ ನಾಕಾ ರೋಡ್, ಜೋಡು ಮಾರುತಿ ಗುಡಿ ಲೈನ್, ಸುಣಗಾರ ಓಣಿ ಒಂದು ನಂಬರ್ ಶಾಲೆ ಹಾಗೂ ಹಿಂದಿನ ಭಾಗಗಳು, 76 ಪ್ಲಾಟ್, ಹಸಿರು ಕೆರೆ ದಿಬ್ಬ, ರಂಗನವಾಡ, ಗುಜ್ಜರ ಬಸ್ತಿ ಲೈನ್, ರಾಚೋಟೇಶ್ವರ ಗುಡಿಯ ಮುಂದಿನ ಭಾಗ, ಏಳು ಮಕ್ಕಳ ತಾಯಿ ಗುಡಿ ಲೈನ್, ಬನ್ನಿ ಮಹಾಕಾಳಿ ಲೈನ್,

ವಾರ್ಡ್ ನಂ. 22 ಗಂಗಿಮಡಿ ಉಕ್ಕಿಯವರ ಲೈನ್, ಪಾಮಡೆಯವರ ಲೈನ್, ನಿಂಗಪ್ಪನ ಲೈನ್, ಸಫಾಯಿಯವರ ಲೈನ್, ಸ್ವಾಮಿಯವರ ಲೈನ್ , ಗಾರ್ಡನ್ ಲೈನ್, ವಾಯ್ಯದಾರ ಲೈನ್, ಶುದ್ಧ ನೀರಿನ ಘಟಕದ ಲೈನ್.

ವಾರ್ಡ್ ನಂ. 16,17 ಪೂರ್ತಿ ಭಾಗಗಳು. ವಾರ್ಡ್ ನಂ. 21, 22, 23 ಜಕ್ಕಲಿಯವರ ಲೈನ್, ನಾಗಪ್ಪನ ಕಟ್ಟಿ, ಶರಣಪ್ಪರ ಲೈನ್, ಪಾಟೀಲ್, ರಾಚೋಟೇಶ್ವರ ಗುಡಿಯ ಮುಂದಿನ ಭಾಗ, ಲಕ್ಕುಂಡಿಯವರ ಲೈನ್, ಮಾನ್ವಿಯವರ ಲೈನ್, ಅಕ್ಕಿಯವರ ಲೈನ್, ಗೆಳೆಯರ ಬಳಗ, ಬಾಳೆಕಾಯಿಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 29 ಪಂಚಾಕ್ಷರಿ ನಗರ, ಸಾಯಿನಗರ, ಕಲಾಮಂದಿರ ರೋಡ ಕೆಲವು ಭಾಗಗಳು. ವಾರ್ಡ್ ನಂ.28 ಪಂಚಾಕ್ಷರಿ 3ನೇ ಕ್ರಾಸ್ ಕೆಲವು ಭಾಗಗಳು. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಕೆಳಗಿನ ಭಾಗ, ಮೇಲಿನ ಭಾಗ.

**ವಿಶೇಷ ಸೂಚನೆ :** ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ಅವುಗಳನ್ನು ದೃಶ್ಯ ಮಾಧ್ಯಮ ಹಾಗೂ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಕರವನ್ನು ಸಂದಾಯ ಮಾಡಿ ಸಹಕರಿಸಲು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಜ್ಯಮಟ್ಟದ ಪ.ಪೂ ಕಾಲೇಜು ವಿದ್ಯಾರ್ಥಿಗಳ ಹಾಕಿ ಪಂದ್ಯಾವಳಿಗೆ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಚಾಲನೆ

# ಕ್ರೀಡಾ ಮನೋಭಾವನೆಯಿಂದ ಆಟವಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದ ಹಾಕಿ ಕ್ರೀಡಾಪಟುಗಳನ್ನು ಗದಗ ಜಿಲ್ಲೆ ನೀಡಿದೆ. ಇಲ್ಲಿನ ಮಕ್ಕಳಲ್ಲಿ ಹಾಕಿ ಕ್ರೀಡಾಸಕ್ತಿ ಅಧಿಕವಾಗಿರುವುದೇ ಹೆಚ್ಚು ಹೆಚ್ಚು ಕ್ರೀಡಾಪಟುಗಳು ಹೊರಬರಲು ಸಾಧ್ಯವಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಹೇಳಿದರು.

ಗದಗ-ಬೆಟಗೇರಿ ಗಾಂಧಿ ನಗರದ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆ-ಬೆಂಗಳೂರು, ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ(ಪದವಿಪೂರ್ವ), ಗದಗ ಜಿಲ್ಲಾ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ ಗದಗ, ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘ ಧಾರವಾಡ- ಗದಗ ಜಿಲ್ಲಾ ಘಟಕ, ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾ ಘಟಕ, ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಜಿಲ್ಲಾ ಘಟಕ ಹಾಗೂ ಹನುಮಾನ್ ಬ್ಲೆಸಿಂಗ್ಸ್ ಸ್ಪೋರ್ಟ್ಸ್ ಕ್ಲಬ್ ಬೆಟಗೇರಿ ಇವರುಗಳ ಆಶ್ರಯದಲ್ಲಿ



ಗುರುವಾರ ಸಂಜೆ ಏರ್ಪಡಿಸಲಾದ ರಾಜ್ಯ ಮಟ್ಟದ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ ಹಾಕಿ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಅತ್ಯಾಧುನಿಕ ಟರ್ಫ್ ಹಾಕಿ ಕ್ರೀಡಾಂಗಣ ಇರುವುದು ನಾಲ್ಕು ಕಡೆ ಮಾತ್ರ. ಅದರಲ್ಲಿ ಗದಗ ಸಹ ಒಂದು. 9.5 ಕೋಟಿ ರೂ ಅನುದಾನದಲ್ಲಿ ಸುಸಜ್ಜಿತ ಹಾಕಿ ಮೈದಾನ ನಿರ್ಮಾಣ ಮಾಡಲಾಗಿದೆ. ಇತ್ತೀಚೆಗೆ ಈ ಹಾಕಿ ಕ್ರೀಡಾಂಗಣವನ್ನು ಕ್ರೀಡಾ ಸಚಿವ ನಾಗೇಂದ್ರ ಬಿ, ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹದೇವಪ್ಪ, ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರುಗಳು ಲೋಕಾರ್ಪಣೆ ಮಾಡಿದ್ದಾರೆ. ಸರ್ಕಾರ ಕ್ರೀಡಾಪಟುಗಳಿಗೆ ಉತ್ತಮ ಪ್ರೋತ್ಸಾಹ ಮತ್ತು ಅಗತ್ಯ ಸೌಲಭ್ಯಗಳನ್ನು ನೀಡುತ್ತಿದೆ. ಇದಕ್ಕೆ ಗದಗ ಹಾಕಿ ಕ್ರೀಡಾಂಗಣ ಉತ್ತಮ ಉದಾಹರಣೆಗೆಯಾಗಿದೆ ಎಂದರು.

> ಕ್ರೀಡಾ ಕ್ಷೇತ್ರದಲ್ಲಿ ಗದಗ ಜಿಲ್ಲೆ ಉತ್ತಮ ಸಾಧನೆ ತೋರಿದೆ. ಇಂತಹ ಜಿಲ್ಲೆಗೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಹಾಕಿ ಕ್ರೀಡೆಯಲ್ಲಿ ಪಾಲ್ಗೊಳ್ಳಲು ಆಗಮಿಸಿದ ಎಲ್ಲ ಮಕ್ಕಳೂ ಉತ್ಸಾಹ ಹಾಗೂ ಕ್ರೀಡಾ ಮನೋಭಾವನೆಯಿಂದ ಆಟವಾಡಬೇಕು. ಆಟದಲ್ಲಿ ಸೋಲು-ಗೆಲವು ಸಾಮಾನ್ಯ ಎಂಬುದನ್ನು ಎಲ್ಲರೂ ಅರಿತು, ಕ್ರೀಡಾ ಸ್ಫೂರ್ತಿ ಮೆರೆಯಬೇಕು.
>
> **- ವೈಶಾಲಿ ಎಂ.ಎಲ್.**
> **ಜಿಲ್ಲಾಧಿಕಾರಿಗಳು, ಗದಗ.**

ಮುಖ್ಯ ಅತಿಥಿಗಳಾಗಿ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಎಂ.ಸಿ. ಕಟ್ಟಿಮನಿ, ವೈ.ಜಿ. ಗಡಾದ, ರಮೇಶ ಗಂಗಾಪುತ್ರ, ವೈ.ಬಿ. ಕೊರವರ, ಮಂಜುನಾಥ ಬಗಾಡೆ, ಅಶೋಕ ಅಂಗಡಿ, ಚಂದ್ರ ನಾಯ್ಕ, ವಾಸು ಕಲಕಂಬಿ ಮುಂತಾದವರು ಪಾಲ್ಗೊಂಡಿದ್ದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಡಾ. ಕೃಷ್ಣಪ್ಪ.ಪಿ. ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಚಾರ್ಯ ವೈ.ಸಿ. ಪಾಟೀಲ ಸ್ವಾಗತಿಸಿದರು. ಸೌಜನ್ಯ ಹಾಗೂ ಸಂಗಡಿಗರು ನಾಡಗೀತೆ ಹಾಡಿದರು.

### ವಿದ್ಯಾರ್ಥಿಗಳಿಗೆ ಉಚಿತ ಬೈಸಿಕಲ್ ವಿತರಣೆ ವಿಚಾರವಾಗಿ ಸಚಿವ ಮಧು ಬಂಗಾರಪ್ಪ ಪ್ರತಿಕ್ರಿಯೆ

# ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಮುಂದಿನ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಸರಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತ ಬೈಸಿಕಲ್ ವಿತರಣೆ ಕಾರ್ಯಕ್ರಮ ಆರಂಭಿಸುವುದಕ್ಕೆ ಸಂಬಂಧಿಸಿದಂತೆ ಮ್ಮುಖ್ಯಮ್ಂತ್ರಿಗ್ಳೊಂದಿಗ್ ಚರ್ಚಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ವಿಧಾನಸಭೆಯಲ್ಲಿ ಸದಸ್ಯ ಪ್ರದೀಪ್ ಈಶ್ವರ್ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ಈ ಹಿಂದೆ 2019-20ನೇ ಸಾಲಿನಲ್ಲಿ ಉಚಿತ ಬೈಸಿಕಲ್ ವಿತರಣೆ ಮಾಡಲಾಗಿದೆ. ಪ್ರಸ್ತುತ ಸಾಲಿನಲ್ಲಿ ಸರಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಬೈಸಿಕಲ್ ವಿತರಿಸಲಾಗುತ್ತಿಲ್ಲ. ಆದರೆ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಾಲೆಗೆ ನಿರಂತರವಾಗಿ ಹಾಜರಾಗಲು ಅನುಕೂಲವಾಗುವಂತೆ ಸರಕಾರಿ ಬಸ್‌ಗಳಲ್ಲಿ ಪ್ರಯಾಣಿಸಲು ಉಚಿತವಾಗಿ



> ಮಲೆನಾಡು ಭಾಗದ ಎಲ್ಲ ಸರಕಾರಿ ನೌಕರರಿಗೆ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ಗಿರಿತಾಣ ಭತ್ಯೆ ರದ್ದುಪಡಿಸಿ ಆದೇಶಿಸಿರುವುದರಿಂದ ಚಿಕ್ಕಮಗಳೂರು ಜಿಲ್ಲೆಯ ಗುಡ್ಡಗಾಡು ಪ್ರದೇಶಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಸದ್ಯಕ್ಕೆ ಗಿರಿಭತ್ಯೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಸದಸ್ಯ ನಯನಾ ಮೋಟಮ್ಮ ಅವರ ಪ್ರಶ್ನೆಗೆ ಸಚಿವ ಮಧು ಬಂಗಾರಪ್ಪ ಉತ್ತರಿಸಿದರು.

ಬಸ್‌ಪಾಸ್ ವಿತರಿಸಲಾಗುತ್ತಿದೆ.

ಸಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಕೇಂದ್ರ ಪ್ರಾಯೋಜಿತ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆ ಅಡಿಯಲ್ಲಿ ತಮ್ಮ ವ್ಯಾಪ್ತಿಯನ್ನು ಮೀರಿದ ಶಾಲೆಗಳಿಗೆ ಕ್ರಮಿಸಲು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ 600 ರೂ.ಗಳಂತೆ ಆರು ತಿಂಗಳಿಂದ ಸಾರಿಗೆ ಭತ್ಯೆ ನೀಡಲಾಗುತ್ತಿದೆ ಎಂದರು.

2020-21ರಿಂದ 2022-23ನೇ ಸಾಲಿನವರೆಗೆ 7098 ಶಾಲೆಗಳಿಗೆ 9604 ಕೊಠಡಿಗಳ ನಿರ್ಮಾಣ ಹಾಗೂ ಇತರೆ ಕಾಮಗಾರಿಗಳಿಗೆ ಒಟ್ಟು 129768.90 ಲಕ್ಷ ರೂ.ಗಳು ನಿಗದಿಯಾಗಿದ್ದು, ರೂ.9450.139 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಿ ಕ್ರಮ ವಹಿಸಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ಉತ್ತರಿಸಿದರು.

ಈ ಕೊಠಡಿಗಳ ನಿರ್ಮಾಣಕ್ಕೆ ಕೊರತೆಯಾಗಿರುವ ಅನುದಾನವನ್ನು 2023-24ನೇ ಸಾಲಿನಲ್ಲಿ ಒದಗಿಸಲು ಕ್ರಮ ವಹಿಸಲಾಗಿದೆ.

ಆಯ-ವ್ಯಯದಲ್ಲಿ ಒದಗಿಸಲಾದ ಅನುದಾನ ಲಭ್ಯತೆ ಆಧರಿಸಿ ಅಗತ್ಯತೆಗೆ ಅನುಗುಣವಾಗಿ ಹಂತಹಂತವಾಗಿ ರಾಜ್ಯಾದ್ಯಂತ ಶಾಲೆಗಳಲ್ಲಿ ಕೊಠಡಿ ನಿರ್ಮಾಣ ಮಾಡಲು ಅಗತ್ಯ ಕ್ರಮ ವಹಿಸಲಾಗುತ್ತಿದೆ ಎಂದರು.

## ದರಪಟ್ಟಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ವ್ಯಾಪ್ತಿಯ ಪಟ್ಟಣ ಪಂಚಾಯತಿ ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯ ಪ್ರದೇಶಗಳಲ್ಲಿ 2023ನೇ ವರ್ಷದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸುವ ಸನ್ನಿವೇಶಗಳು ಎದುರಾದಲ್ಲಿ ತಕ್ಷಣ ಪರಿಹಾರ ಕಾರ್ಯವಾಗಿ ಸಮಸ್ಯಾತ್ಮಕ ಪ್ರದೇಶಗಳಲ್ಲಿ ಕುಡಿಯುವ ನೀರನ್ನು ಖಾಸಗಿ ಟ್ಯಾಂಕರ್‌ಗಳ ಮೂಲಕ ಸರಬರಾಜು ಮಾಡುವುದು ಅತ್ಯವಶ್ಯಕವಾಗಿರುತ್ತದೆ.

ಈ ನಿಟ್ಟಿನಲ್ಲಿ ಟ್ಯಾಂಕರ್ ಸರಬರಾಜುದಾರರಿಂದ ಷರತ್ತುಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಕುಡಿಯುವ ನೀರು ಪೂರೈಕೆ ಮಾಡಲು ಆಸಕ್ತಿ ಇರುವ ಗುತ್ತಿಗೆದಾರರು ಫಾರ್ಮ್‌ಗಳನ್ನು ಡಿಸೆಂಬರ್ 13 ರ ಸಂಜೆ 4 ಗಂಟೆಯವರೆಗೆ ತಹಸೀಲ್ದಾರ ಕಚೇರಿಯಲ್ಲಿ ಪ್ರಕೃತಿ ವಿಕೋಪ ಪರಿಹಾರ ಶಾಖೆ ಎಚ್.ಎಫ್. ಮ್ಯಾಗೇರಿ ದ್ವಿ.ದ.ಸ. ಫೋನ್ ನಂ. 8050298103 ಇವರಿಂದ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೋಣ ತಾಲೂಕಾ ದಂಡಾಧಿಕಾರಿಗಳು ಹಾಗೂ ತಹಸೀಲ್ದಾರರ ಕಾರ್ಯಾಲಯ ದೂರವಾಣಿ ಸಂಖ್ಯೆ 08381-267239 ಸಂಪರ್ಕಿಸಬಹುದಾಗಿದೆ.

### ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ ನೌಕರರ ಸಂಘದಿಂದ ಧರಣಿ

# ನೌಕರರ ಬೇಡಿಕೆಗಳನ್ನು ಈಡೇರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿರಿ ನೌಕರರ ಸಂಘದ ಜಿಲ್ಲಾ ಸಮಿತಿ ವತಿಯಿಂದ ಸರಕಾರದಿಂದ ವೇತನ ಪಾವತಿಗೆ ಸಂಬಂಧಿಸಿದಂತೆ ಹಲವಾರು ತಿಂಗಳುಗಳು ಕಳೆದರೂ ಗ್ರಾಮ ಪಂಚಾಯಿತಿಗಳಲ್ಲಿ ಆದೇಶಗಳು ಜಾರಿಯಾಗುತ್ತಿಲ್ಲ. ಇಈಒಖ ಸೇರ್ಪಡೆ ಮಾಡುವುದು, ನಿವೃತ್ತಿಯಾದವರಿಗೆ ಉಪಧನ ನೀಡದಿರುವುದು, ತೆರಿಗೆ ಸಂಗ್ರಹದಲ್ಲಿ ಶೇ.40 ವೇತನ ನೀಡದಿರುವುದು ಇತ್ಯಾದಿ ವಿಚಾರಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಾಜ್ಯ ಗ್ರಾ.ಪಂ ನೌಕರರ ಸಂಘದ ರಾಜ್ಯಾಧ್ಯಕ್ಷ ಎಂ.ಬಿ. ನಾಡಗೌಡ್ರ, ಉಪಾಧ್ಯಕ್ಷ ರುದ್ರಪ್ಪ ಕಂದಗಲ್ಲ ನೇತೃತ್ವದಲ್ಲಿ ಧರಣಿ ನಡೆಸಿ, ಗದಗ ಜಿಲ್ಲಾ ಪಂಚಾಯಿತಿಯ ಮುಖ್ಯ




ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಎಂ.ಬಿ. ನಾಡಗೌಡ್ರ ಮಾತನಾಡಿ, ಖಾಲಿಯಿರುವ ಕಾರ್ಯದರ್ಶಿ ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಸೇವೆಯೊಳಗಿನ ನೇರ ನೇಮಕಾತಿಗೆ ಪ್ರಕ್ರಿಯೆ ಪ್ರಾರಂಭವಾಗಿದ್ದರೂ, ಇಲ್ಲಿಯವರೆಗೆ ಬಿಲ್ ಕಲೆಕ್ಟರ್ ಹಾಗೂ ಕ್ಲಾರ್ಕ, ಕಾರ್ಕ ಕಂ. ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ನೇಮಕಾತಿ ಆದೇಶವನ್ನು ನೀಡದೆ ವಿಳಂಬ ನೀತಿ ಅನುಸರಿಸಲಾಗುತ್ತಿದೆ. ಕೂಡಲೇ ಈ ಬೇಡಿಕೆಗಳನ್ನು ಈಡೇರಿಸಬೇಕು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾ.ಪಂ ನೌಕರರ ಸಂಘ (ಸಿ.ಐ.ಟಿ.ಯು ಸಂಯೋಜಿತ) ಅಧ್ಯಕ್ಷ ಬಸವರಾಜ ಮಂತೂರ, ಸಿಐಟಿಯು ಮುಖಂಡ ಪೀರು ರಾಠೋಡ, ಮಹಾಂತೇಶ ಧಾರವಾಡ, ಪ್ರಕಾಶ, ಬೋರಣಿ, ಬಸವರಾಜ ಮೇವುಂಡಿ, ಮಲ್ಲೇಶ ಪ್ಯಾಟಿ, ಬಸವರಾಜ ಅರ್ಕಸಾಲಿ, ಮಹೇಶ ಮೂಲಿಮನಿ, ಈಶ್ವರ ದಮಾನಿ, ವೀರನಗೌಡ ಪಾಟೀಲ, ರುದ್ರಗೌಡ ಸಂಕನಗೌಡ್ರ, ರಾಜು ಕಲಗುಡಿ, ಕುಮಾರ ಕಾರಬಾರ, ಸಿದ್ದಯ್ಯ ಮಣ್ಣೂರಮಠ, ಬಸವರಾಜ ಮುಧೋಳ, ಮಂಜುಳಾ ಸೀತಿಮನಿ, ಶಾರದಾ, ನೂರಭಾಷಾ, ಶಿವು ಮೊರಬ, ರುದ್ರಪ್ಪ ಐನಾಪೂರ, ರಮೇಶ, ಚಂದ್ರು ಉಪಾಧ್ಯ, ಮಲ್ಲಿಕಾರ್ಜುನ ಮುತಾರಿ, ಮಲ್ಲಿಕಾರ್ಜುನ ಮುತಾರಿ, ನೀಲಮ್ಮ ಬಾರದ್ವಾಡ, ಕವಿತಾ ಹಮ್ಮಿಗಿ ಮುತ್ತಿತರರು ಉಪಸ್ಥಿತರಿದ್ದರು.

## ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ ಸೂಕ್ತ ಕಾನೂನು ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ರಾಜ್ಯದಲ್ಲಿ ಈಗಾಗಲೇ ವಾಸಿಸುತ್ತಿರುವ ಅಕ್ರಮ ಬಾಂಗ್ಲಾ ವಲಸಿಗರು ಮತ್ತು ವಿದೇಶಿ ವಲಸಿಗರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು.

ವಿಧಾನ ಪರಿಷತ್‌ನ ಪ್ರಶ್ನೋತ್ತರ ವೇಳೆಯಲ್ಲಿ ಉಮಾಶ್ರೀ ಅವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ರಾಜ್ಯದಲ್ಲಿನ ಈಗಾಗಲೇ ವಾಸಿಸುತ್ತಿರುವ ಅಕ್ರಮ ಬಾಂಗ್ಲಾ ವಲಸಿಗರು ಮತ್ತು ವಿದೇಶಿ ವಲಸಿಗರನ್ನು ಪತ್ತೆ ಹಚ್ಚುವ ಸಲುವಾಗಿ ಗುಪ್ತಚರ ವಿಭಾಗದ ಸಿಬ್ಬಂದಿ, ಠಾಣ ಸಿಬ್ಬಂದಿಗಳು ಸೂಕ್ತ ಗಸ್ತು ಮಾಡುವ ಮೂಲಕ ಪತ್ತೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಅಂತಹ ಅಕ್ರಮ ವಲಸಿಗರನ್ನು ಪತ್ತೆ ಹಚ್ಚಿ ಸೂಕ್ತ ಕ್ರಮ ಕೈಗೊಳ್ಳುವಂತೆ ಎಫ್‌ಆರ್‌ಆರ್‌ಓ ಅವರ ಮುಂದೆ ಮುಂದಿನ ಕ್ರಮಕ್ಕಾಗಿ ಹಾಜರುಪಡಿಸಲಾಗುವುದು ಎಂದರು.

ರಾಜ್ಯದಲ್ಲಿ ಇದುವರೆಗೆ ಅಕ್ರಮ ಬಾಂಗ್ಲಾ ಮತ್ತು ವಿದೇಶಿಯರ ವಿರುದ್ಧ 764 ಪ್ರಕರಣಗಳು ದಾಖಲಾಗಿದ್ದು, ಅದರಲ್ಲಿ ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ 53 ಪ್ರಕರಣ ಹಾಗೂ ವಿದೇಶಿಯರ ವಿರುದ್ಧ 711 ಪ್ರಕರಣಗಳು



ದಾಖಲಾಗಿದ್ದು, 135 ಅಕ್ರಮ ಅಕ್ರಮ ಬಾಂಗ್ಲಾ ವಲಸಿಗರನ್ನು ಪತ್ತೆ ಹಚ್ಚಲಾಗಿದೆ ಎಂದರು.

ಈ ಅಕ್ರಮ ವಲಸಿಗರಿಗೆ ನಕಲಿ ಆಧಾರ್ ಕಾರ್ಡ್ ಹಾಗೂ ಇನ್ನಿತರ ದಾಖಲೆಗಳನ್ನು ಸೃಷ್ಟಿಸಿಕೊಡುತ್ತಿರುವ ಏಜೆಂಟ್‌ಗಳ ವಿರುದ್ಧ 4 ಹಾಗೂ ಮಧ್ಯವರ್ತಿಗಳ ವಿರುದ್ಧ 4 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದರು.

## ಸಂಪಾದಕೀಯ

# ಮದ್ಯ ಮಾರಾಟ ಹೆಚ್ಚಳ, ರಾಜ್ಯದ ಬೊಕ್ಕಸಕ್ಕೆ ಆದಾಯ ಆದರೆ...

ಗ್ಯಾರಂಟಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅಬಕಾರಿ ಆದಾಯವನ್ನೇ ನಂಬಿಕೊಂಡಿರುವ ಕಾಂಗ್ರೆಸ್ ಸರ್ಕಾರಕ್ಕೆ ಸಿಹಿ ಸುದ್ದಿಯೊಂದು ಸಿಕ್ಕಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ 0.43 ಪ್ರತಿಶತ ಹೆಚ್ಚು ಮದ್ಯ ಮಾರಾಟವಾಗಿದೆ ಮತ್ತು ರಾಜ್ಯ ಸರ್ಕಾರಕ್ಕೆ ಬರಬೇಕಾದ ಆದಾಯವು ಹೆಚ್ಚಾಗಿದೆ. ರಾಜ್ಯದಲ್ಲಿ ಪ್ರತಿದಿನ ಸರಾಸರಿ 80 ಕೋಟಿ ರೂಪಾಯಿ ಅಬಕಾರಿ ಆದಾಯ ರಾಜ್ಯ ಸರ್ಕಾರದ ಬೊಕ್ಕಸವನ್ನ ಸೇರುತ್ತಿದೆ. ಅಂದರೆ ಪ್ರತಿ ತಿಂಗಳು 2500 ಕೋಟಿ ರೂಪಾಯಿಗೂ ಹೆಚ್ಚು ಹಣ ರಾಜ್ಯ ಸರ್ಕಾರಕ್ಕೆ ಸೇರುತ್ತಿದೆ.

ಸದ್ಯ ಅಬಕಾರಿ ಆದಾಯ ಹೆಚ್ಚಳದಿಂದ ರಾಜ್ಯ ಸರ್ಕಾರ ಸಂತುಷ್ಟವಾಗಿದೆ. ಅಬಕಾರಿ ಸುಂಕವನ್ನ ಎಷ್ಟೇ ಹೆಚ್ಚಳ ಮಾಡಿದರು ಮಧ್ಯಪ್ರಿಯರು ವ್ಯಸನದಿಂದ ಮುಕ್ತರಾಗದೆ, ಮತ್ತಷ್ಟು ಇನ್ನಷ್ಟು ಮದ್ಯವ್ಯಸನಿಗಳಾಗುತ್ತಿದ್ದಾರೆ. ಅದರೆ ರಾಜ್ಯದಲ್ಲಿ ಈ ಬಾರಿ ಅಬಕಾರಿ ಆದಾಯ ಅಷ್ಟೇ ಅಲ್ಲದೆ, ಮದ್ಯ ವ್ಯಸನಿಗಳ ಸಂಖ್ಯೆಯೂ ಕೂಡ ಅಷ್ಟೇ ಹೆಚ್ಚಳವಾಗಿದೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ಸರ್ಕಾರ ಸ್ವಸ್ಥ ಸಮಾಜವನ್ನು ನಿರ್ಮಾಣ ಮಾಡುವ ಇಚ್ಛೆ ಹೊಂದಿದ್ದಲ್ಲಿ ಈ ಅಂಕಿ ಅಂಶಗಳನ್ನ ಗಂಭೀರವಾಗಿ ಪರಿಗಣಿಸಬೇಕಿದೆ.

ರಾಜ್ಯದಲ್ಲಿ ಮದ್ಯ ವ್ಯಸನಿಗಳ ಸಂಖ್ಯೆ ಹೆಚ್ಚಾಗಿದೆ ಎಂದರೆ ಯುವಕರು ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ ಎಂದೇ ಅರ್ಥ. ಯುವಕರೇ ಹೆಚ್ಚಾಗಿ ದುಶ್ಚಟಗಳಿಗೆ ದಾಸರಾಗುತ್ತಿರುವುದು ಅನೇಕ ಸಂಶೋಧನೆಗಳಿಂದ ಈಗಾಗಲೇ ದೃಢಪಟ್ಟಿದೆ.

ಆಧುನಿಕತೆ, ಬದಲಾದ ಜೀವನ ಶೈಲಿಯಿಂದ ಯುವಕರು ಇವತ್ತು ಅತ್ಯಂತ ಸುಲಭವಾಗಿ ದುಶ್ಚಟಕ್ಕೆ ಬಲಿಯಾಗುತ್ತಾರೆ. ಅದರಲ್ಲೂ ಕುಡಿತಕ್ಕೆ ಬಹುಬೇಗ ಆಕರ್ಷಿತರಾಗುತ್ತಾರೆ. ಇದಕ್ಕೆ ಕೇವಲ ಸರ್ಕಾರವನ್ನ ದೂಷಣೆ ಮಾಡುವುದಕ್ಕಿಂತ ಸಮುದಾಯವೂ ಕೂಡ ಜಾಗೃತವಾಗಬೇಕು.

ಮನೆ, ಶಾಲೆ- ಕಾಲೇಜು, ಪರಿಸರವು ಮುಖ್ಯವಾಗುತ್ತದೆ. ಅದರ ಜೊತೆಗೆ ಸರಕಾರವು ಕೈಜೋಡಿಸಬೇಕಾಗುತ್ತದೆ. ಕುಡಿತದ ದಾಸರಾದವರನ್ನು ಮನಃಪರಿವರ್ತನೆ ಮಾಡಲು ಸರ್ಕಾರಕ್ಕೆ ಕಷ್ಟ ಸಾಧ್ಯ. ಆದರೆ ಕುಡಿತ ಒಳ್ಳೆಯದಲ್ಲ ಎನ್ನುವ ಜನಜಾಗೃತಿಯ ಸಂದೇಶವನ್ನ ಸಾರುವ ಕೆಲಸವನ್ನು ಮಾಡಬಹುದು. ಹದಿಹರೆಯದ ಯುವಕ ಯುವತಿಯರಿಗೆ ಅವರು ಕಲಿಯುವ ಜಾಗದಲ್ಲಿಯೇ ಅವರಿಗೆ ತಿಳಿವಳಿಕೆ ನೀಡಬೇಕಾಗಿದೆ.

ಶಾಲೆ, ಕಾಲೇಜು ಹಂತದಲ್ಲಿಯೇ ಯುವಕರಿಗೆ ದುಶ್ಚಟಗಳಿಂದ ದೂರವಿರುವ ಬಗ್ಗೆ ನೈತಿಕ ಶಿಕ್ಷಣ ನೀಡುವಂತಾಗಬೇಕು. ಸದ್ಯ ನಮ್ಮ ಶಿಕ್ಷಣ ವ್ಯವಸ್ಥೆಯಲ್ಲಿ ಅಂಥ ಪರಿಪಾಠ ಯಾವುದೂ ಇಲ್ಲ. ಆ ಕಾರಣಕ್ಕಾಗಿಯೇ ಇವತ್ತು ಮದ್ಯ ವ್ಯಸನಿಗಳ ಸಂಖ್ಯೆ ಅಧಿಕವಾಗುತ್ತಿರುವುದು. ಸರಕಾರ ಒಂದಷ್ಟಾದರೂ ಅಂಕುಶ ಹಾಕದಿದ್ದರೆ ಭವಿಷ್ಯದಲ್ಲಿ ಬಹುದೊಡ್ಡ ಸಾಮಾಜಿಕ ಸಮಸ್ಯೆ ಎದುರಿಸಬೇಕಾಗುತ್ತದೆ.

### ಬೀರಪ್ಪ ಚಿನ್ನಪ್ಪ ವಗ್ಗಿಯವರಿಗೆ ಒಲಿದ ರಾಷ್ಟ್ರ ಮಟ್ಟದ 'ಬಿಲಿಯನೇರ್ ರೈತ' ಪ್ರಶಸ್ತಿ

# ಕೃಷಿಯಲ್ಲೇ ಕಸುವು ಕಂಡ ಅಪರೂಪದ ರೈತ



ಬೀರಪ್ಪ ಚಿನ್ನಪ್ಪ ವಗ್ಗಿಯವರು ಕೃಷಿ ಕ್ಷೇತ್ರದಲ್ಲಿ ಮಾಡಿರುವ ಸಾಧನೆಯನ್ನು ಗುರುತಿಸಿ ಬೆಂಗಳೂರಿನ ಭಾರತಿಯ ಕೃಷಿ ಸಂಶೋಧನಾ ಪರಿಷತ್ ಮತ್ತು ಕೃಷಿ ತಂತ್ರಜ್ಞಾನಗಳ ಅನುಕರಣ ಸಂಶೋಧನಾ ಸಂಸ್ಥೆಗಳ ಶಿಫಾರಸಿನ ಮೇರೆಗೆ 'ರಾಷ್ಟ್ರ ಮಟ್ಟದ ಕೋಟ್ಯಾದಿಶ ರೈತ' ಪ್ರಶಸ್ತಿಗೆ ಆಯ್ಕೆ ಮಾಡಿದ್ದಾರೆ.

ಡಿ. 7ರಂದು ನವದೆಹಲಿಯ ಕೃಷಿ ಜಾಗರಣ ಸಂಸ್ಥೆಯವರು ಹಮ್ಮಿಕೊಂಡ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಬೀರಪ್ಪ ವಗ್ಗಿಯವರಿಗೆ ಕೇಂದ್ರ ರಸ್ತೆ ಸಾರಿಗೆ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಮಂತ್ರಿ ನಿತಿನ್ ಗಡ್ಕರಿಯವರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು. ಪ್ರಶಸ್ತಿ ಪ್ರಧಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ನಿತಿನ್ ಗಡ್ಕರಿ, ರಾಷ್ಟ್ರೀಯ ಕೃಷಿ ಜಾಗರಣ ಸಂಸ್ಥೆಯ ಅಧಿಕಾರಿಗಳು, ಕೇಂದ್ರ ಸರಕಾರದ ಕೃಷಿ ಇಲಾಖೆಯ ಅಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯದ ಅಧಿಕಾರಿಗಳು ಆಗಮಿಸಿದ್ದರು.

ಸಮಾರಂಭದ ಅದ್ಯಕ್ಷತೆಯನ್ನು ಗುಜರಾತ್‌ನ ರಾಜ್ಯಪಾಲ ಆಚಾರ್ಯ ದೇವವ್ರತ್‌ರವರು ವಹಿಸಿದ್ದರು. ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಬೀರಪ್ಪ ವಗ್ಗಿಯವರು ನಿತಿನ್ ಗಡ್ಕರಿಯವರಿಗೆ ಅವರ ತೋಟದಲ್ಲಿ ಬೆಳೆದ ವಿವಿಧ ತಳಿಯ ಲಿಂಬು ಹಣ್ಣುಗಳನ್ನು ನೀಡಿ, ಅವುಗಳ ಗುಣಮಟ್ಟ ಮತ್ತು ಅದಕ್ಕೆ ಪೂರಕವಾದ ಸಾವಯವ ಕೃಷಿಯ ವಿಧಾನಗಳ ಕುರಿತು ವಿವರಿಸಿದರು. ಪ್ರತಿನಿತ್ಯ ತಾಂಬಾ ಗ್ರಾಮದಿಂದ ಮುಬೈ ಮತ್ತು ದೆಹಲಿ ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ಲಿಂಬು ಪೂರೈಕೆಯಾಗುತ್ತಿದೆ ಎಂದು ವಿವರಿಸಿದರು.

ಬೀರಪ್ಪ ವಗ್ಗಿಯವರು ವಿಜಯಪುರ ಜಿಲ್ಲೆ ಇಂಡಿ ತಾಲೂಕಿನ ತಾಂಬಾ ಗ್ರಾಮದವರು. ಅವಿಭಕ್ತ ಕುಟುಂಬದ ಎಲ್ಲಾ ವ್ಯವಹಾರದ ನಿರ್ವಹಣೆ ಮಾಡುತ್ತಿದ್ದಾರೆ. ಕುಟುಂಬದ ಏಳು ಜನ ಸಹೋದರರು ಒಟ್ಟಾಗಿರುವದು ಅತ್ಯಂತ ಅಪರೂಪ. ಹಿರಿಯ ಸಹೋದರ ಮಾಳಿಂಗರಾಯ ವಗ್ಗಿಯವರು ಗದುಗಿನ ಪ್ರತಿಷ್ಠಿತ ಕೆ.ಎಸ್.ಎಸ್ ಮಹಾವಿದ್ಯಾಲಯದಲ್ಲಿ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿ ಗದಗದಲ್ಲಿ ನೆಲೆಸಿದ್ದಾರೆ. ಸಹೋದರರಾದ ಬಸಪ್ಪ ಮತ್ತು ಪದ್ಮಣ್ಣ ಇಬ್ಬರೂ ಬೀರಪ್ಪ ವಗ್ಗಿಯವರೊಂದಿಗೆ ಕೃಷಿ ಕಾಯಕದಲ್ಲಿ ತೊಡಗಿದ್ದಾರೆ. ಒಬ್ಬ ಸಹೋದರ ಬಲವಂತ ವಗ್ಗಿಯವರು ಬೆಂಗಳೂರಿನ ಪ್ರತಿಷ್ಠಿತ ಬಿ.ಇ.ಎಲ್ ಕಂಪನಿಯಲ್ಲಿ ಅಸಿಸ್ಟಂಟ್ ಜನರಲ್ ಮ್ಯಾನೇಜರರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇನ್ನಿಬ್ಬರು ಸಹೊದರರಾದ ರಾಮಣ್ಣ ಮತ್ತು ಲಕ್ಷ್ಮಣ ಕ್ರಮವಾಗಿ ವಿಜಯ ಕರ್ನಾಟಕ ಮತ್ತು ವಿಜಯವಾಣಿ ಪತ್ರಿಕೆಗಳ ಜಿಲ್ಲಾ ಛಾಯಾಚಿತ್ರ ವರದಿಗಾರರಾಗಿ ಗದಗದಲ್ಲಿ ಸೇವೆಸಲ್ಲಿಸುತ್ತಿದ್ದಾರೆ. ಇಬ್ಬರು ಸಹೋದರಿಯರು ಸುಗಲಾಬಾಯಿ ಹಂಜಗಿ ಮುರಾರ್ಜಿ ವಸತಿ ಶಾಲೆಯ ಪ್ರಾಂಶುಪಾಲರಾಗಿ, ನೀಲಾಬಾಯಿ ಮಾಳಗೊಂಡ ಸರಕಾರಿ ಶಾಲಾ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದು ತಮ್ಮ ಕುಟುಂಬ ಪರಿವಾರದೊಂದಿಗೆ ನೆಮ್ಮದಿಯ ಜೀವನ ಸಾಗಿಸುತ್ತಿದ್ದಾರೆ.

ಪಿತ್ರಾರ್ಜಿತವಾಗಿ ಬಂದ ಕೇವಲ 3 ಎಕರೆ ಜಮೀನ ಈಗ ಎಲ್ಲ ಸಹೋದರರು ಒಟ್ಟಾಗಿ ದುಡಿಯುವ ಮೂಲಕ ಕುಟುಂಬದ ಒಟ್ಟು ಆಸ್ತಿ 125 ಎಕರೆ ಮಾಡಿದ್ದಾರೆ. ತಮ್ಮ ತೋಟದಲ್ಲಿ 110 ಅಡಿ ಉದ್ದ, 110 ಅಡಿ ಅಗಲ, 60 ಅಡಿ ಆಳವಾದ ಬಾವಿಯನ್ನು ತೆ-ಗೆದು (sic: ತೆ–ೂಡಿಸಿ) ಸಾಕಷ್ಟು ನೀರು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಸುಮಾರು 70 ಎಕರೆ ಫಲವತ್ತಾದ ಭೂಮಿಯಲ್ಲಿ ದ್ರಾಕ್ಷಿ, ಲಿಂಬು, ಕಬ್ಬು, ಕಡಲೆ, ಉಳ್ಳಾಗಡ್ಡಿ, ಹತ್ತಿ, ಗೋವಿನ ಜೋಳ ಮುಂತಾದ ವಾಣಿಜ್ಯ ಬೆಳೆಗಳನ್ನು ಬೆಳೆಯುತ್ತಿದ್ದಾರೆ.

ಇಂದು ರೈತರು ಸಾಲಭಾದೆ, ಕಾರ್ಮಿಕರ ಕೊರತೆ, ಗುಣಮಟ್ಟದ ಬೀಜ, ಗೊಬ್ಬರದ ಕೊರತೆ, ನೈಸರ್ಗಿಕ ಸವಾಲುಗಳು ಮುಂತಾದ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಎಲ್ಲಾ ಸಮಸ್ಯೆಗಳನ್ನು ಮೆಟ್ಟಿನಿಂತು ಅತ್ಯಧಿಕ ಫಸಲು ಪಡೆದ ಕೆಲವು ರೈತರು ಸದಾ ಕ್ರಿಯಾಶೀಲರಾಗಿ ಆದರ್ಶ ರೈತರಾಗಿ ಸಮಾಜಕ್ಕೆ ಹಾಗೂ ಕೃಷಿ ಕ್ಷೇತ್ರಕ್ಕೆ ಅಪಾರವಾದ ಕೊಡುಗೆಗಳನ್ನು ಕೊಟ್ಟಿದ್ದಾರೆ. ಇಂತಹ ಆದರ್ಶ ರೈತರಲ್ಲಿ ಬೀರಪ್ಪ ವಗ್ಗಿಯವರು ಪ್ರಮುಖರಾಗಿದ್ದಾರೆ. ಇವರಿಗೆ ರಾಷ್ಟ್ರ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಿರುವುದು ಅವರ ಸಾಧನೆಗೆ ಸಂದ ಗೌರವವಾಗಿದೆ. ಇವರು ಕೃಷಿ ಕ್ಷೇತ್ರದಲ್ಲಿ ಇನ್ನೂ ಹೆಚ್ಚಿನ ಸಾಧನೆ ಮಾಡುವ ಶಕ್ತಿಯನ್ನು ಭಗವಂತನು ನೀಡಲೆಂದು ಪ್ರಾರ್ಥಿಸುತ್ತೇವೆ.

– ನೀಲಮ್ಮ ಹ.ಮಾಳಗೊಂಡ.
ಸಹಶಿಕ್ಷಕಿ, ತಾಂಬಾ–ಇಂಡಿ.

> ವಗ್ಗಿಯವರು ಕೃಷಿ ಕಾಯಕದಲ್ಲಿ ವಿನೂತನ ಪ್ರಯೋಗಗಳನ್ನು ರೂಢಿಸಿಕೊಂಡು, ಅವುಗಳನ್ನು ಕ್ರಿಯಾತ್ಮಕವಾಗಿ ತಮ್ಮ ಕೃಷಿಯಲ್ಲಿ ಅಳವಡಿಸಿ ಯಶಸ್ಸು ಕಂಡಿದ್ದಾರೆ. ಇವರ ಕೃಷಿ ಸಾಧನೆಯನ್ನು ಗುರುತಿಸಿ ರಾಜ್ಯದ ಪ್ರತಿಷ್ಠಿತ ಕೃಷಿ ವಿಶ್ವವಿದ್ಯಾಲಯ ಧಾರವಾಡ ಇವರಿಗೆ 2018–19ನೇ ಸಾಲಿನ ಶ್ರೇಷ್ಠ ಕೃಷಿಕ ಪ್ರಶಸ್ತಿ, 2020ನೇ ಸಾಲಿನಲ್ಲಿ ಸಿದ್ದೇಶ್ವರ ಸಂಸ್ಥೆಯವರು ನೀಡುವ ಕೃಷಿಕ ರತ್ನ ಪ್ರಶಸಿ, ವಿಜಯ ಕರ್ನಾಟಕ ದಿನಪತ್ರಿಕೆ ನೀಡುವ ವಿಕ ಸುಪರ್ ಸ್ಟಾರ್ ರೈತ–2021 ಜಿಲ್ಲಾ ಮಟ್ಟದ ಪ್ರಶಸ್ತಿ ಮತ್ತು ಅದೇ ವರ್ಷ ವಿಕ ಸುಪರ್ ಸ್ಟಾರ್ ರೈತ–2021 ರಾಜ್ಯ ಮಟ್ಟದ ಪ್ರಶಸ್ತಿ ದೊರೆತಿರುವುದು ಅವರ ಸಾಧನೆಗೆ ಸಂದ ಗೌರವವಾಗಿದೆ.

## ಕಂದಾಯ ಗ್ರಾಮ ಪರಿವರ್ತನೆಗೆ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ರಾಜ್ಯದ ವಿವಿಧೆಡೆ ಇರುವ ಲಂಬಾಣಿ ತಾಂಡಾ, ಗೊಲ್ಲರಹಟ್ಟಿ, ವಡ್ಡರಹಟ್ಟಿ, ಕುರುಬರಹಟ್ಟಿ, ನಾಯಕರಹಟ್ಟಿ, ಮಜರೆಗ್ರಾಮ, ಹಾಡಿ, ದೊಡ್ಡಿ, ಪಾಳ್ಯ, ಕ್ಯಾಂಪ್, ಕಾಲೋನಿ ಮತ್ತು ಇತರೆ ದಾಖಲೆ ದಾಖಲೆ ರಹಿತ ಜನವಸತಿ ಪ್ರದೇಶಗಳು, ಕಂದಾಯ ಗ್ರಾಮ ಪಟ್ಟಿಯಿಂದ ಬಿಟ್ಟು ಹೋಗಿವೆ. ಅಂತಹುಗಳನ್ನು ಪರಿಶೀಲಿಸಿ ಕಂದಾಯ ಗ್ರಾಮವನ್ನಾಗಿ ಮಾಡಲು ಕ್ರಮ ವಹಿಸಲಾಗುವುದು ಎಂದು ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಹೇಳಿದರು.

ಶಾಸಕ ಎಂ.ನಾಗರಾಜ ಅವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ದಾಖಲೆ ರಹಿತ ಮಜರೆ ಗ್ರಾಮಗಳನ್ನು ಅಧಿಕೃತವಾಗಿ ಗುರುತಿಸಿ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಕಾರ್ಯಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ಬಗ್ಗೆ ಆಯಾ ಶಾಸಕರೊಂದಿಗೆ ಸಹ ಚರ್ಚಿಸಿದ್ದು ಆಯಾ ಕಡೆಗಳಲ್ಲಿ ಕಂದಾಯ ಗ್ರಾಮಗಳು ಪಟ್ಟಿಯಿಂದ ಬಿಟ್ಟು ಹೋಗಿರುವ ದಾಖಲೆ ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಗುರುತಿಸಿ ಪಟ್ಟಿಯಲ್ಲಿ ಸೇರಿಸಿ ಪ್ರಸ್ತಾವನೆ ಕಳುಹಿಸಿ ಎಂದು ತಿಳಿಸಲಾಗಿದೆ. ಅಂತಹ ಪಟ್ಟಿ ನಮಗೆ ಲಭ್ಯವಾದರೆ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದು ಎಂದು ಸಚಿವರು ತಿಳಿಸಿದರು.

## ಕೊಬ್ಬರಿ ಪ್ರೋತ್ಸಾಹಧನ ಹೆಚ್ಚಳಕ್ಕೆ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ರಾಜ್ಯ ಸರಕಾರವು ತೆಂಗು ಬೆಳೆಗಾರರಿಗೆ ಸಹಾಯ ಮಾಡಲು, ಕೇಂದ್ರದ ಬೆಂಬಲ ಬೆಲೆ ಯೋಜನೆಯಡಿ ನೀಡುವ ದರದೊಂದಿಗೆ ಕೊಬ್ಬರಿ ಖರೀದಿಗೆ ಈಗಾಗಲೇ 1,225 ರೂ.ಗಳ ಪ್ರೋತ್ಸಾಹಧನ ನೀಡುತ್ತಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ವಿಧಾನಸಭೆಯಲ್ಲಿ ತಿಳಿಸಿದರು.

ಶೂನ್ಯ ವೇಳೆಯಲ್ಲಿ ಶಾಸಕ ಶಿವಲಿಂಗೆಗೌಡ, ಎಚ್.ಡಿ. ರೇವಣ್ಣ ಸೇರಿದಂತೆ ವಿವಿಧ ಶಾಸಕರು ಕೊಬ್ಬರಿ ಖರೀದಿ ಬೆಲೆ ಕಡಿಮೆ ಆಗಿರುವುದರಿಂದ ಸರಕಾರಗಳು ರೈತರ ನೆರವಿಗೆ ಬರಬೇಕೆಂಬ ವಿಷಯವಾಗಿ ಉತ್ತರಿಸಿದರು. ನಫೇಡ್ ಸಂಸ್ಥೆ ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ಕೊಬ್ಬರಿ ಖರೀದಿ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ರೈತರಿಗೆ ತೊಂದರೆಯಾಗಿದೆ. ರಾಜ್ಯ ಸರಕಾರ ಕೊಬ್ಬರಿ ಖರೀದಿಗೆ ನೀಡಿರುವ ಈಗೀರುವ ಪ್ರೋತ್ಸಾಹಧನ ರೂ.1225ಗಳೊಂದಿಗೆ ರೂ.225 ಸೇರಿಸಿ ಒಟ್ಟು 1500 ರೂ.ಗಳನ್ನು ನೀಡುತ್ತದೆ. ಕೇಂದ್ರ ಆದಷ್ಟು ಬೇಗ ಖರೀದಿ ಪ್ರಾರಂಭಿಸಿದರೆ ರೈತರಿಗೆ ಒಳಿತಾಗುತ್ತದೆ ಎಂದು ತಿಳಿಸಿದರು.

## 100 ಹೊಸ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಚಿಂತನೆ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ರಾಜ್ಯದ ಎಲ್ಲಾ ಶಾಸಕರಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಒತ್ತಡ ಕೇಳಿ ಬರುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದಿಂದ 100 ಹೊಸ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಚಿಂತನೆ ನಡೆಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಹೇಳಿದರು.

ಬೆಳಗಾವಿಯಲ್ಲಿ ಜರುಗುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಬುಧವಾರದ ವಿಧಾನಸಭಾ ಪ್ರಶ್ನೋತರ ಕಲಾಪದ ವೇಳೆ ಶಾಸಕರ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಿ ಅವರು ಮಾತನಾಡಿದರು.

ಬಳಹಷ್ಟು ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಸಿಗದೆ ಹಾಗೆ ಉಳಿಯುತ್ತಾರೆ. ಈ ಬಾರಿ ವಿದ್ಯಾರ್ಥಿ ನಿಲಯಗಳ ಸಂಖ್ಯಾಬಲದ ಶೇ.25ರಷ್ಟು ಹೆಚ್ಚು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ. ಪ್ರವೇಶ ಸಿಗದ ವಿದ್ಯಾರ್ಥಿಗಳಿಗೆ ಸರ್ಕಾರ ವಿದ್ಯಾಸಿರಿ ಯೋಜನೆಯನ್ನು ಜಾರಿ ಮಾಡಿದೆ. ಪ್ರಸಕ್ತ ವರ್ಷದಲ್ಲಿ ರೂ.38 ಕೋಟಿಗಳನ್ನು ವಿದ್ಯಾಸಿರಿಯಡಿ ನೀಡಲಾಗಿದೆ ಎಂದರು.

ಸರ್ಕಾರ ಮುಂದಿನ 30 ವರ್ಷಗಳ ಆಲೋಚನೆ ಇಟ್ಟುಕೊಂಡು ವಿದ್ಯಾರ್ಥಿ ನಿಲಯಗಳ ಯೋಜನೆ ರೂಪಿಸಬೇಕು. ವಿದ್ಯಾರ್ಥಿಗಳಿಗೆ ತೊಂದರೆಯಾಗದ ಹಾಗೆ, ಶಾಲಾ–ಕಾಲೇಜು ಆರಂಭವಾಗುವ ವೇಳೆ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಬೇಕು ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಸಚಿವರಿಗೆ ಸೂಚಸಿದರು.

## ವಸತಿ ಶಾಲೆಯಲ್ಲಿ ಸ್ಥಳೀಯ ವಿದ್ಯಾರ್ಥಿಗಳಿಗೆ ಶೇ.60 ಸ್ಥಾನ ಮೀಸಲು



■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಕ್ಕೆ ಸ್ಥಳೀಯ ಪ್ರದೇಶದಲ್ಲಿ ವಾಸಿಸುತ್ತಿರುವ, ಆಯಾ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಶೇ.60ರಷ್ಟು ಸ್ಥಾನಗಳನ್ನು ಮೀಸಲಿರಿಸಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬುಧವಾರ ವಿಧಾನಸಭಾ ಅಧಿವೇಶನದಲ್ಲಿ ಶಾಸಕ ಶಿವಲಿಂಗೇಗೌಡ ಕೆ.ಎಂ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಸಮಾಜ ಕಲ್ಯಾಣ ಇಲಾಖೆ ಸಚಿವರ ಪರವಾಗಿ ಅವರು ಉತ್ತರಿಸಿದರು.

ವಸತಿ ಶಾಲೆಗಳ ಶೇ.60ರಷ್ಟು ಮೀಸಲಾತಿಯು 2024–25ನೇ ಸಾಲಿನಿಂದ ಅನುಷ್ಠಾನಕ್ಕೆ ಬರಲಿದೆ. ಉಳಿದ ಶೇ.40ರಷ್ಟು ಸ್ಥಾನಗಳನ್ನು ಅಂತರ್ ತಾಲ್ಲೂಕು, ಜಿಲ್ಲೆ, ಹಾಗೂ ರಾಜ್ಯದ ಮೂಲಕ ಭರ್ತಿ ಮಾಡಲಾಗುವುದು ಎಂದು ತಿಳಿಸಿದರು.

ಶಾಸಕ ಶಿವಲಿಂಗೇಗೌಡ ಮಾತನಾಡಿ, ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ಮೀಸಲಾತಿಯನ್ನು ಶೇ.60ರಿಂದ ಶೇ.75ಕ್ಕೆ ಹೆಚ್ಚಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

## ಕೃಷಿ ಇಲಾಖೆಯ ಖಾಲಿ ಹುದ್ದೆಗಳಿಗೆ ಎರಡು ಹಂತದಲ್ಲಿ ನೇಮಕಾತಿ



■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆ ಅನುಮತಿ ನೀಡಿದೆ. ಈ ಹುದ್ದೆಗಳಿಗೆ ಎರಡು ಹಂತದಲ್ಲಿ ನೇಮಕಾತಿ ಪ್ರಕ್ರಿಯೆ ನಡೆಯಲಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

ಬುಧವಾರ ವಿಧಾನಸಭಾ ಅಧಿವೇಶನದಲ್ಲಿ ಬೀಳಗಿ ಶಾಸಕ ಪಾಟೀಲ್ ಜೆ.ಟಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೃಷಿ ಇಲಾಖೆಯಲ್ಲಿ ಶೇ.60ರಷ್ಟು ಹುದ್ದೆಗಳ ಕೊರತೆ ಇದೆ. ಇದರಿಂದಾಗಿ ಹೋಬಳಿ ಹಾಗೂ ಗ್ರಾಮಗಳಲ್ಲಿ ಅಧಿಕಾರಿಗಳು ತೆರಳಿ ಕ್ಷೇತ್ರ ಕಾರ್ಯನಿರ್ವಹಿಸುವಲ್ಲಿ ತೊಂದರೆಯಾಗುತ್ತಿದೆ. ಈ ಸಮಸ್ಯೆಯನ್ನು ನೇಮಕಾತಿ ಮಾಡುವ ಮೂಲಕ ಶೀಘ್ರವೇ ಬಗೆಹರಿಸಲಾಗುವುದು ಎಂದರು.

ರೈತರಿಗೆ ಭೂ ಫಲವತ್ತತೆ ಕುರಿತು ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳಲ್ಲಿ ತರಬೇತಿ ನೀಡಲಾಗುತ್ತಿದೆ. ಮಣ್ಣು ಪರೀಕ್ಷೆಯ ಮೂಲಕ ಸಮತೋಲನ ಪ್ರಮಾಣ ರಸಗೊಬ್ಬರಗಳ ಬಳಕೆಗೆ ಶಿಫಾರಸ್ಸು ಮಾಡಲಾಗುತ್ತಿದೆ.

ಮಣ್ಣಿನ ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನದಡಿ ಹಸಿರೆಲೆ ಗೊಬ್ಬರದ ಬೀಜಗಳನ್ನು ಶೇ.75ರ ಸಹಾಯಧನದಲ್ಲಿ ರೈತ ಸಂಪರ್ಕ ಕೇಂದ್ರಗಳ ಮೂಲಕ ವಿತರಣೆ ಮಾಡಲಾಗುತ್ತಿದೆ. ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ ರೂ.3 ಕೋಟಿ ಒದಗಿಸಲಾಗಿದೆ ಎಂದರು.

## ಡಿ.13ರಂದು ಸಿರಿಧಾನ್ಯ ಪಾಕ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯುವ ಮೇಳ–2024 ರ ಅಂಗವಾಗಿ

ಸಿರಿಧಾನ್ಯ ಪಾಕ ಸ್ಪರ್ಧೆಯನ್ನು ಡಿಸೆಂಬರ್ 13 ರಂದು ಬೆಳಿಗ್ಗೆ 11ಗಂಟೆಗೆ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಮುಳಗುಂದ ರಸ್ತೆ, ಗದಗದಲ್ಲಿ ಆಯೋಜಿಸಲಾಗಿದೆ. ಈ ಸ್ಪರ್ಧೆಯಲ್ಲಿ ಜಿಲ್ಲೆಯ ಸಾರ್ವಜನಿಕರು ಭಾಗವಹಿಸಲು ಅವಕಾಶವಿದೆ. ವಿದ್ಯಾರ್ಥಿಗಳು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿಗಳಿಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿಲ್ಲ. ಪ್ರತಿ ಸ್ಪರ್ಧೆಗೆ ಒಂದೇ ತಿನಿಸು (ಅಡುಗೆ) ಸಿಹಿ ಅಥವಾ ಖಾರ ಮಾಡಲು ಅವಕಾಶವಿದೆ. (ಸಸ್ಯಹಾರಿ ಪದಾರ್ಥ ಮಾತ್ರ) ಮನೆಯಲ್ಲಿಯೇ ತಯಾರಿಸಿದ ಸಿರಿಧಾನ್ಯ ತಿನಿಸು (ಅಡುಗೆ) ಪ್ರದರ್ಶಿಸಲು ಅವಕಾಶವಿರುತ್ತದೆ. ಪ್ರಥಮ ಬಹುಮಾನ ಖಾರ ತಿನಿಸು ಅಥವಾ ಸಿಹಿ ತಿನಿಸಿಗೆ ತಲಾ ರೂ. 5000/– ಬಹುಮಾನವಿರುತ್ತದೆ.

ವಿಜೇತ ಸ್ಪರ್ಧಿಯು ಕಡ್ಡಾಯವಾಗಿ ಡಿಸೆಂಬರ್ 23 ರಂದು ಬೆಂಗಳೂರಿನಲ್ಲಿ ನಡೆಯಲಿರುವ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮಂಜುನಾಥ ಭರಮಗೌಡರ, ಮೋ: 8217773915 ಮತ್ತು ಮಹಾದೇವ ಭೈರವಾಡ, ಮೊ: 8217528993 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ತಾರಾಮಣಿ ಜಿ. ಎಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇನ್ನರ್‌ವ್ಹೀಲ್ ಕ್ಲಬ್‌ನಿಂದ ಸುರಭಿ ವೃದ್ಧಾಶ್ರಮಕ್ಕೆ ಭೇಟಿ




■ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವ್ಹೀಲ್ ಕ್ಲಬ್ ಗದಗ–ಬೆಟಗೇರಿ ಸದಸ್ಯರು ಹುಲಕೋಟಿಯ ಸುರಭಿ ವೃದ್ಧಾಶ್ರಮಕ್ಕೆ ಭೇಟಿ ನೀಡಿ ಕುಶಲೋಪರಿ ವಿಚಾರಿಸಿ, ಅಗತ್ಯ ಸಾಮಗ್ರಿಗಳ ವಿತರಣೆ ಮಾಡಿದರು.

ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ರಜನಿ ಪಾಟೀಲರ ಮಾರ್ಗದರ್ಶನದಲ್ಲಿ ಭೇಟಿ ನೀಡಿದ ಸದಸ್ಯೆಯರು, ವೃದ್ಧಾಶ್ರಮದಲ್ಲಿರುವವರ ಜೊತೆ ಕೆಲ ಹೊತ್ತು ಮಾತುಕತೆ ನಡೆಸಿದರು. ನಮ್ಮ ಕ್ಲಬ್‌ನ ಸದಸ್ಯೆಯರು ಯಾವಾಗಲೂ ತಮ್ಮ ಜೊತೆ ಒಡನಾಟ ಹೊಂದಿ ಆಗಾಗ ಬಂದು ಕೆಲಹೊತ್ತು ತಮ್ಮೊಂದಿಗೆ ಕಳೆಯುವದಾಗಿ ಹೇಳಿ ಅವರಲ್ಲಿ ಉತ್ಸಾಹ ತುಂಬಿದರು. ಕಾರ್ಯದರ್ಶಿ ಹೇಮಾ ಪೊಂಗಾಲಿಯಾ, ಪ್ರೇಮಾ ಮೇಟಿ, ಜ್ಯೋತಿ ಭರಮಗೌಡರ ಮೊದಲಾದವರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ವೃದ್ಧಾಶ್ರಮಕ್ಕೆ ಇನ್ನರವ್ಹೀಲ್ ಕ್ಲಬ್ ವತಿಯಿಂದ ಹೊಸ ಬಟ್ಟೆ, ಸಾಕ್ಸ್, ಅಕ್ಕಿ ಇತ್ಯಾದಿ ಅಗತ್ಯ ವಸ್ತುಗಳನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ಮ್ಯಾನೆಜಮೆಂಟ್‌ನ ರಾಜೇಸಾಬ್ ಉಪಸ್ಥಿತರಿದ್ದರು.

### ಆಟೋ ಚಾಲಕ–ಮಾಲಕರ ಸಂಘದಿಂದ

## ಡಾ. ಬಿ.ಆರ್. ಅಂಬೇಡ್ಕರರ ಪುತ್ಥಳಿಗೆ ಗೌರವ ನಮನ



■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರರ ಮಹಾಪರಿನಿರ್ವಾಣದ ನಿಮಿತ್ತ ಬುಧವಾರ ಗದಗ–ಬೆಟಗೇರಿ ನಗರಸಭೆಯ ಆವರಣದಲ್ಲಿ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಹಳೆಯ ಬಸ್ ನಿಲ್ದಾಣದ ಆಟೋ ಚಾಲಕರ, ಮಾಲಕರ ಸಂಘದ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಹೇಮಂತ ಕಾಳೆ, ಪ್ರಶಾಂತ ದೊಡ್ಡಮನಿ, ಚಂದ್ರಶೇಖರ ಸಾಲಮನಿ, ಲಿಂಗರಾಜ ಹೊಸಮನಿ, ರವಿ ತಮ್ಮಣ್ಣನವರ, ಅಶೋಕ ಕುಂದಗೋಳ, ವಿರೇಶ ಕಡಿವಾಳ, ಸಿಕಂದರ ಕೊಟ್ಟೂರು, ಎಂ. ಬದ್ಲಿ, ಸಿರಾಜ ಪತ್ತಾರ ಸೇರಿದಂತೆ ಅಟೋ ಚಾಲಕರು ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆ ಸರಿಪಡಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ವಾರ್ಡ್ ನಂ. 13ರ ವಿವೇಕಾನಂದ ಕೊಳಚೆ ಪ್ರದೇಶದಲ್ಲಿ 24*7 ಕುಡಿಯುವ ನೀರಿನ ಸಮಸ್ಯೆಯನ್ನು ಸರಿಪಡಿಸುವಂತೆ ಆಶೀಸ್ ಪಿ.ಗುಂತಕಲ್ಲ ಹಾಗೂ ವಿವೇಕಾನಂದ ಕೊಳಚೆ ಪ್ರದೇಶದ ಸಾರ್ವಜನಿಕರು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಆಶೀಸ ಪಿ. ಗುಂತಕಲ್ಲ, ಈ ಭಾಗದಲ್ಲಿ ಈಗಾಗಲೇ 24*7 ನೀರು ಸರಬರಾಜಿನ ಪೈಪ್‌ಲೈನ್ ಅಳವಡಿಸಿದ್ದು, 100 ಮನೆಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಆದರೆ ಕೆಲವು ಭಾಗದಲ್ಲಿ ಸರಿಯಾದ ರೀತಿಯಲ್ಲಿ ನೀರು ನಿರ್ವಹಣೆ ಆಗುತ್ತಿಲ್ಲ. ಕೆಲವೆಡೆ ಜಿ.ಆಯ್. ಪೈಪ್ ತುಕ್ಕು ಹಿಡಿದು ಹಾಳಾಗಿದೆ. ನಗರಸಭೆಯ ಕಿರಿಯ ಅಭಿಯಂತರರು ಸ್ಥಳ ಪರಿಶೀಲಿಸಿದ್ದರೂ ಕೆಲಸವಾಗಿಲ್ಲ. ನೀರು ಪೂರೈಕೆಯಲ್ಲಿ ವ್ಯತ್ಯಯವಾದಾಗ ನಗರಸಭೆಯ ವತಿಯಿಂದ ಟ್ಯಾಂಕರ್ ನೀರು ಪೂರೈಕೆಗೆ ವ್ಯವಸ್ಥೆ ಮಾಡುತ್ತಿಲ್ಲ. ಈ ವಿಷಯಗಳನ್ನು ಗಂಭೀರವಾಗಿ ಚರ್ಚಿಸಿ, ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ವಿನಂತಿಸಿದರು.

# ಬರ ನಿರ್ವಹಣೆಗೆ ಅಗತ್ಯ ಮುಂಜಾಗ್ರತಾ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ



ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕುಸಿದಿದ್ದು, ಈ ಕುರಿತು ಅಧ್ಯಯನ ಮಾಡಿ ಸೂಕ್ತ ಶಿಫಾರಸ್ಸು ಮಾಡಲು ತಜ್ಞರೊಳಗೊಂಡ ವಾಟರ್ ಆಡಿಟ್ ಕಮಿಟಿಯನ್ನು ರಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ವಿಧಾನಸಭೆಯಲ್ಲಿ ಗುರುವಾರ ನಡೆದ ಬರ ವಿಷಯದ ಕುರಿತಾದ ಚರ್ಚೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ರಾಜ್ಯ ಸರಕಾರವು ಎಲ್ಲಾ ರೀತಿಯ ಮುಂಜಾಗೃತಾ ಕ್ರಮಗಳನ್ನು ಕೈಗೊಂಡಿದೆ. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖಾಂತರ ಪ್ರತಿ ಜಿಲ್ಲೆಯಲ್ಲಿ ಕಂಟಿಜೆನ್ಸಿ ಪ್ಲಾನ್ ತಯಾರಿಸಲಾಗಿದ್ದು, ಪ್ರತಿ ತಿಂಗಳು ವಿಡಿಯೊ ಕಾನ್ಫರೆನ್ಸ್ ಮೂಲಕ ಸಭೆ ಜರುಗಿಸಿ ಪ್ರಗತಿ ಪರಿಶೀಲನೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಬರ ನಿರ್ವಹಣೆಯಲ್ಲಿ ಲೋಪವಾಗದಂತೆ, ಮುಂದಿನ ದಿನಗಳಲ್ಲಿ ಉದ್ಭವಿಸಬಹುದಾದ ಬರ ಹಿನ್ನೆಲೆಯ ಸಮಸ್ಯೆಗಳ ಬಗ್ಗೆ ಸರಕಾರವು ಮುನ್ನೆಚ್ಚರಿಕೆ ವಹಿಸಿದೆ. ಪ್ರತಿ ಜಿಲ್ಲಾ ಪಂಚಾಯಿತಿಯ ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗದಲ್ಲಿ ಕುಡಿಯುವ ನೀರಿಗಾಗಿ 1 ಕೋಟಿ ರೂ.ಗಳ ಹಣವನ್ನು ಪ್ರತ್ಯೇಕವಾಗಿ ಬಿಡುಗಡೆ ಮಾಡಲಾಗಿದೆ. ಸದನ ಸದಸ್ಯರ ಸಲಹೆ ಮೇರೆಗೆ ಅಗತ್ಯವಿರುವ ಕ್ರಮವಹಿಸುವುದಾಗಿ ಅವರು ತಿಳಿಸಿದರು.

ಬೀಚಿ ಬಳಗದ ದಶಮಾನೋತ್ಸವದಲ್ಲಿ ಹಾಸ್ಯ ದಿಗ್ಗಜರ ಸಂಗಮ

# ಡಿ.10ರಂದು ನರೇಗಲ್ಲದಲ್ಲಿ ನಗೆಹೊನಲು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಡಿ. 10ರಂದು ಪಟ್ಟಣದ ಹಿರೇಮಠದ ಆವರಣದಲ್ಲಿ ನರೇಗಲ್ಲ ಬೀಚಿ ಬಳಗದ ದಶಮಾನ ಸಂಭ್ರಮ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ನಾಡಿನ ಹೆಸರಾಂತ ಹರಟೆ ಮಲ್ಲ ಹಿರೇಮಗಳೂರು ಕಣ್ಣನ್ ಆಗಮಿಸಲಿದ್ದಾರೆ ಎಂದು ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಬೀಚಿ ಬಳಗದ ದಶಮಾನೋತ್ಸವದ ವಿವರಗಳನ್ನು ನೀಡಲು ಗುರುವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ದಶಮಾನೋತ್ಸವದ ನಿಮಿತ್ತ ಡಿ. 10ರಂದು ಸಂಜೆ ನಾಡಿನ ಹೆಸರಾಂತ ಹಾಸ್ಯ ದಿಗ್ಗಜರ ದೊಡ್ಡ ಸಮಾಗಮವಾಗಲಿದೆ. ಈ ದಶಮಾನ ಸಂಭ್ರಮಕ್ಕೆ ಅನೇಕ ದಾನಿಗಳು ಉದಾರ ದೇಣಿಗೆಯನ್ನು ನೀಡಿ ಸಹಕರಿಸಿದ್ದಾರೆ. 5 ಸಾವಿರ ಮತ್ತು ಅದಕ್ಕೂ ಮೇಲ್ಪಟ್ಟು ಕಾಣಿಕೆ ನೀಡಿದ ದಾನಿಗಳನ್ನು ಸಮಾರಂಭದಲ್ಲಿ ಸನ್ಮಾನಿಸಲಾಗುತ್ತಿದೆ ಎಂದರಲ್ಲದೆ, ಸಾಹಿತ್ಯಾಸಕ್ತರು ಮತ್ತು ಹಾಸ್ಯವನ್ನು ಆಸ್ವಾದಿಸುವ ಬಯಕೆ ಇರುವವರೆಲ್ಲರೂ ಅಂದು ಈ ದಶಮಾನ ಸಂಭ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದರ ಜೊತೆಗೆ ಕಲಾವಿದರನ್ನು, ಬೀಚಿ ಬಳಗವನ್ನು ಪ್ರೋತ್ಸಾಹಿಸಬೇಕೆಂದರು.



ನಿವೃತ್ತ ಪ್ರಾಚಾರ್ಯ ಡಿ.ಎ. ಅರವಟಗಿಮಠ ಮಾತನಾಡಿ, ಹಿರೇಮಠದ ಆವರಣದಲ್ಲಿ ಡಿ. 10ರಂದು ಸಂಜೆ 4.30ಕ್ಕೆ ನಡೆಯುವ ಬೀಚಿ ಬಳಗದ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಹಾಲಕೆರೆ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಸಾನ್ನಿಧ್ಯ ವಹಿಸುವರು. ರೋಣ ಶಾಸಕ ಜಿ.ಎಸ್. ಪಾಟೀಲ ದಶಮಾನ ಸಂಭ್ರಮವನ್ನು ಉದ್ಘಾಟಿಸುವರು. ಇದೇ ಸಂದರ್ಭದಲ್ಲಿ ಹಿರೇಮಗಳೂರು ಕಣ್ಣನ್ 'ಹಾಸ್ಯಬ್ರಹ್ಮ ಬೀಚಿ (ನಗುನಗುತಾ ಬಾಳೋಣ)' ಸಂಸ್ಮರಣ ಗ್ರಂಥವನ್ನು ಬಿಡುಗಡೆ ಮಾಡಲಿದ್ದಾರೆ. ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸುವರು.

ಬೀಚಿ ಅವರ ಮೊಮ್ಮಗ ಉಲ್ಲಾಸ ಬೀಚಿ, ಗಂಗಾವತಿಯ ಬಿ.ಪ್ರಾಣೇಶ, ಹಾಸ್ಯ ಭಾಷಣಕಾರರಾದ ಬಸವರಾಜ ಮಹಾಮನಿ, ಅನಿಲ ವೈದ್ಯ, ನರಸಿಂಹ ಜೋಷಿ, ನಾಗಶ್ರೀ ತ್ಯಾಗರಾಜನ್ ಸಮಾರಂಭದಲ್ಲಿ ಪಾಲ್ಗೊಂಡು ನರೇಗಲ್ಲ ಮತ್ತು ಸುತ್ತಲಿನ ಗ್ರಾಮಗಳ ಜನತೆಗೆ ನಗೆಯ ಹೊನಲನ್ನೇ ಹರಿಸಲಿದ್ದಾರೆ ಎಂದು ಡಿ.ಎ. ಅರವಟಗಿಮಠ ತಿಳಿಸಿದರು.

ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿ, ಹಾಸ್ಯ ಬ್ರಹ್ಮ ಬೀಚಿಯವರು ನಮ್ಮನ್ನಗಲಿ ಇಂದಿಗೆ ನಾಲ್ಕು ದಶಕಗಳು ಸಂದು ಹೋದವು. ಪ್ರತಿ ವರ್ಷವೂ ನರೇಗಲ್ಲಿಗೆ ಗಂಗಾವತಿಯ ಬೀಚಿ ಬೀ. ಪ್ರಾಣೇಶ್ ಅವರು ತಮ್ಮ ತಂಡದೊಂದಿಗೆ ಬಂದು ಅವರ ಗುರುಗಳ ಪುಣ್ಯ ತಿಥಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿದ್ದರು. ಈ ಸಾರೆ ದಶಮಾನೋತ್ಸವದ ವಿಶೇಷ ಅತಿಥಿಯಾಗಿ ಕಣ್ಣನ್ ಅವರು ಪಾಲ್ಗೊಳ್ಳುತ್ತಿರುವುದು ಈ ಭಾಗದ ಎಲ್ಲ ಸಾಹಿತ್ಯಾಭಿಮಾನಿಗಳಿಗೂ ಸಂತಸ ಮೂಡಿಸಿದೆ. ನರೇಗಲ್ಲ ಮತ್ತು ಸುತ್ತಲಿನ ಗ್ರಾಮಗಳ ಅಭಿಮಾನಿಗಳ ಸಹಕಾರದಿಂದ ದಶಮಾನ ಸಂಭ್ರಮವು ಡಿ. 10ರಂದು ಅದ್ದೂರಿಯಾಗಿ ಜರುಗಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬೀಚಿ ಬಳಗದ ಸಂಚಾಲಕ ಈಶ್ವರ ಬೆಟಗೇರಿ, ಕೋಶಾಧ್ಯಕ್ಷ ಶಿವಯೋಗಿ ಜಕ್ಕಲಿ, ಸಂಘಟನಾ ಕಾರ್ಯದರ್ಶಿಗಳಾದ ಭಾರತಿ ಶಿರ್ಸಿ ಮತ್ತು ಚಂದ್ರಶೇಖರ ಕೇಸರಿ ಸೇರಿದಂತೆ ಬೀಚಿ ಬಳಗದ ಸದಸ್ಯರು ಇದ್ದರು.

ನಿವೃತ್ತ ಪ್ರಾಚಾರ್ಯ ಡಿ.ಎ. ಅರವಟಗಿಮಠ ಮಾತನಾಡಿ, ಹಿರೇಮಠದ ಆವರಣದಲ್ಲಿ ಡಿ. 10ರಂದು ಸಂಜೆ 4.30ಕ್ಕೆ ನಡೆಯುವ ಬೀಚಿ ಬಳಗದ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಹಾಲಕೆರೆ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಸಾನ್ನಿಧ್ಯ ವಹಿಸುವರು. ರೋಣ ಶಾಸಕ ಜಿ.ಎಸ್. ಪಾಟೀಲ ದಶಮಾನ ಸಂಭ್ರಮವನ್ನು ಉದ್ಘಾಟಿಸುವರು. ಇದೇ ಸಂದರ್ಭದಲ್ಲಿ ಹಿರೇಮಗಳೂರು ಕಣ್ಣನ್ 'ಹಾಸ್ಯಬ್ರಹ್ಮ ಬೀಚಿ (ನಗುನಗುತಾ ಬಾಳೋಣ)' ಸಂಸ್ಮರಣ ಗ್ರಂಥವನ್ನು ಬಿಡುಗಡೆ ಮಾಡಲಿದ್ದಾರೆ. ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

# ಶ್ರೀ ಮಹರ್ಷಿ ವಾಲ್ಮೀಕಿ ಜಾತ್ರೆಯ ಪೂರ್ವಭಾವಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರವರಿ 8 ಮತ್ತು 9ರಂದು ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ರಾಜನಹಳ್ಳಿ ವಾಲ್ಮೀಕಿ ಗುರುಪೀಠದಲ್ಲಿ ನಡೆಯಲಿರುವ ಐತಿಹಾಸಿಕ ಶ್ರೀ ಮಹರ್ಷಿ ವಾಲ್ಮೀಕಿ ಜಾತ್ರಾ ಮಹೋತ್ಸವದ ಪ್ರಯುಕ್ತ ಡಿ.9ರಂದು ಮಧ್ಯಾನ 3 ಗಂಟೆಗೆ ನಗರದ ವಾಲ್ಮೀಕಿ ಭವನದಲ್ಲಿ ಜಗದ್ಗುರು ಶ್ರೀ ವಾಲ್ಮೀಕಿ ಪ್ರಸನ್ನಾನಂದ ಶ್ರೀಗಳ ದಿವ್ಯ ಸಾನ್ನಿಧ್ಯದಲ್ಲಿ ಪೂರ್ವಭಾವಿ ಸಭೆ ಜರುಗಲಿದ್ದು, ಪೂರ್ವಾಂಗವಾಗಿ ಗದಗ ಜಿಲ್ಲಾ ವಾಲ್ಮೀಕಿ ನಾಯಕ ಸೇವಾ ಸಂಘದ ವತಿಯಿಂದ ಗುರುವಾರ ಜಿಲ್ಲಾಧ್ಯಕ್ಷ ಬಸವರಾಜ ಎಂ.ಬೆಳಧಡಿ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಜರುಗಿತು

ಸಭೆಯಲ್ಲಿ ಗದಗ ತಾಲೂಕು ವಾಲ್ಮೀಕಿ ನಾಯಕ ಸಮಾಜದ ಹಿರಿಯರು, ಸಮಾಜದ ಜನಪ್ರತಿನಿಧಿಗಳು, ನೌಕರ ಬಾಂಧವರು, ಯುವಕರು, ಮಹಿಳೆಯರು, ಸಮಾಜದ ನೂರಾರು ಭಾಂದವರು ಭಾಗವಹಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಹಿರಿಯರಾದ ಹನಮಂತಪ್ಪ ಕಕ್ಕೇರಿ, ಮಂಜುನಾಥ ತಳವಾರ, ಅನಿಲಕುಮಾರ ಸಿದ್ದಮ್ಮನಹಳ್ಳಿ, ವಸಂತ ಸಿದ್ದಮ್ಮನಹಳ್ಳಿ, ಸೋಮು ವೇಂಕಟಾಪೂರ, ಹನಮಂತ ಪಲದೋಡ್ಡಿ, ಅರುಣ ಬೆಳಧಡಿ, ರಾಮು ಬಾಗಲಕೋಟಿ, ಸುರೇಶ ವಾಲ್ಮೀಕಿ, ಕೃಷ್ಣಪ್ಪ ದೇವರಮನಿ, ಮಂಜುನಾಥ ವಾಲ್ಮೀಕಿ, ಉಮೇಶ ಬೆಳಧಡಿ, ಮಂಜುನಾಥ ಕಕ್ಕೇರಿ, ಅರ್ಜುನ ಬೆಳವಣಿಕಿ, ರಾಘು ನಾಯಕ, ಶಣ್ಮುಖ ಕಕ್ಕೇರಿ, ಚಂದ್ರು ಪೂಜಾರ ಮುಂತಾದವರು ಉಪಸ್ಥಿತರಿದ್ದರು.

# ಕೃಷಿ ವಿಜ್ಞಾನ ಕೇಂದ್ರದಲ್ಲಿ 'ವಿಶ್ವ ಮಣ್ಣು ದಿನಾಚರಣೆ'

■ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ, ಮಂಗಳೂರು ಕೆಮಿಕಲ್ಸ್ ಮತ್ತು ಫರ್ಟಿಲೈಜರ್ಸ್ ನಿಯಮಿತ-ಬೆಂಗಳೂರು ಹಾಗೂ ಕೃಷಿ ಇಲಾಖೆ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ 'ವಿಶ್ವ ಮಣ್ಣು ದಿನಾಚರಣೆ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಮಂಗಳೂರು ಕೆಮಿಕಲ್ಸ ಮತ್ತು ಫರ್ಟಿಲೈಜರ್ಸ್ ನಿಯಮಿತದ ರೀಜನಲ್ ಮಾರ್ಕೆಟಿಂಗ್ ಮುಖ್ಯಸ್ಥ ನಾರಾಯಣಸ್ವಾಮಿ ಆರ್. ನೆರವೇರಿಸಿ ಮಾತನಾಡಿ, ರಾಸಾಯನಿಕ ಗೊಬ್ಬರಗಳ ಸದ್ಬಳಕೆ ಮಾಡಿ, ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಿ ಎಂದು ತಿಳಿಸಿ, ತಮ್ಮ ಕಂಪನಿಯಿಂದ ದೊರೆಯುವ ಗೊಬ್ಬರಗಳ ಕುರಿತು ಮಾಹಿತಿ ನೀಡಿದರು.




ಕೃಷಿ ಇಲಾಖೆಯ ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಮಾತನಾಡಿ, ರೈತ ಬಾಂಧವರು ಕೃಷಿ ಇಲಾಖೆಯಿಂದ ದೊರೆಯುವ ಸಾವಯವ ಗೊಬ್ಬರಗಳು, ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಿ, ಜಮೀನಿಗೆ ಸಮತೋಲನ ಗೊಬ್ಬರಗಳ ಬಳಕೆ ಮಾಡಿ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬೇಕೆಂದರು.

ಕೃಷಿ ಅಧಿಕಾರಿ ರಾಜೇಶ್ವರಿ ಚಿನಿವಾರ ಮಾತನಾಡಿ, ಮುಂಗಾರು ಹಾಗೂ ಹಿಂಗಾರು ಬೆಳೆಗಳಿಗೆ ಜೈವಿಕ ಕೀಟನಾಶಕಗಳನ್ನು ಬಳಸಿ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಿ ಎಂದು ಸಲಹೆ ನೀಡಿದರು. ಸಂಪನ್ಮೂಲ ವ್ಯಕ್ತಿ ಸಿ.ಬಿ. ಪಲ್ಲೇದ ಮಾತನಾಡಿ, ಮಣ್ಣು ಮತ್ತು ನೀರು ಸಂರಕ್ಷಣೆ ಮಾಡಿ ಮಣ್ಣಿನ ಸವಕಳಿ ತಡೆಗಟ್ಟಿ ಮಣ್ಣಿನ ಫಲವತ್ತತೆ ಕಾಯ್ದುಕೊಂಡು ಒಳ್ಳೆಯ ಇಳುವರಿ ಪಡೆಯಬೇಕೆಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥೆ ಡಾ. ಸುಧಾ ವಿ.ಮಂಕಣಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮಣ್ಣು ಆರೋಗ್ಯ ಪತ್ರಗಳನ್ನು ರೈತರಿಗೆ ನೀಡಲಾಯಿತು. ಹುಲಕೋಟಿ ಗ್ರಾ.ಪಂ ಅಧ್ಯಕ್ಷೆ ನಾಗರತ್ನ ಬಾಳಿಹಳ್ಳಿಮಠ, ಕಳಾಸಾಪೂರ ಗ್ರಾ.ಪಂ ಅಧ್ಯಕ್ಷೆ ಅನುಸೂಯಾ ಬೆಟಗೇರಿ ಉಪಸ್ಥಿತರಿದ್ದರು. ಎನ್.ಎಚ್. ಭಂಡಿ ಸ್ವಾಗತಿಸಿದರು. ಡಾ. ವಿನಾಯಕ ನಿರಂಜನ ಕಾಯಕ್ರಮ ನಿರೂಪಣೆ ಮಾಡಿದರು.

# ವಿಡಿಎಸ್ ಕ್ಲಾಸಿಕ್ ಪ್ರಾಥಮಿಕ ಶಾಲೆಯಲ್ಲಿ 'ಫ್ಲವರ್ಸ್ ಡೇ'

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ ಕ್ಲಾಸಿಕ್ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ 'ಫ್ಲವರ್ಸ್ ಡೇ' ಆಚರಿಸಲಾಯಿತು.ಶಾಲೆಯ ನರ್ಸರಿ, ಎಲ್‌ಕೆಜಿ ಮತ್ತು ಯುಕೆಜಿ ವಿದ್ಯಾರ್ಥಿಗಳು ತಮಗೆ ತಿಳಿದ ವಿವಿಧ ಬಗೆಯ ಹೂಗಳನ್ನು ತಂದು, ಶಿಕ್ಷಕರ ಮಾರ್ಗದರ್ಶನದಂತೆ ಹೂಗಳಿಂದ ವಿವಿಧ ಕಲಾ ಕೃತಿಗಳನ್ನು, ಪ್ರಾಣಿ-ಪಕ್ಷಿಗಳನ್ನು ಹಾಗೂ ರಂಗೋಲಿ ರಚಿಸಿದರು. ಸುಂದರ ಕಲಾಕೃತಿಗಳನ್ನು ರಚಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.




ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಮಾತನಾಡಿ, ಮಕ್ಕಳ ಮನಸ್ಸು ಹೂವಿನಂತೆ. ಅದು ಇಡೀ ಸಮಾಜಕ್ಕೆ ಪರಿಮಳ ಬೀರಲು ಶಿಕ್ಷಕರ ಮಾರ್ಗದರ್ಶನವೇ ಕಾರಣ. ಇಂತಹ ಆಚರಣೆಗಳಿಂದ ಮಕ್ಕಳಿಗೆ ವಿವಿಧ ಬಗೆಯ ಹೂಗಳ ಪರಿಚಯ, ಸ್ಪರ್ಧಾ ಮನೋಭಾವನೆ, ಸೃಜನಶೀಲತೆ ಹಾಗೂ ಉತ್ತಮವಾದ ಕಲಾಶಕ್ತಿ ಬೆಳೆಯುತ್ತದೆ ಎಂದರು.

ಸ್ಪರ್ಧೆಯ ನಿರ್ಣಾಯಕರಾಗಿ ತೀರ್ಪು ನೀಡಿದ ಶಿಕ್ಷಕಿ ರೇಣುಕಾ ವೆಂಕಟಾಪುರ ಮಕ್ಕಳ ಕಲಾಶೀಲತೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿದ ಶಿಕ್ಷಕಿಯರಾದ ಪಾರ್ವತಿ ಕಟ್ಟಿಮನಿ, ವೀಣಾ ಹುಬ್ಬಳ್ಳಿ ಇವರಿಗೆ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಅಭಿನಂದಿಸಿದರು.

## ನಿಧನ ವಾರ್ತೆ

### ಮರಿಯಪ್ಪ ಶೇಡದ



ಲಕ್ಕುಂಡಿ, ಇಲ್ಲಿಯ ಗೌರಿ ಓಣಿಯ ನಿವಾಸಿ ಮರಿಯಪ್ಪ ದೊಡ್ಡಕೊಟ್ರಪ್ಪ ಶೇಡದ (77) ಗುರುವಾರ ನಿಧನರಾದರು. ಮೃತರು ಪತ್ನಿ, ಪುತ್ರ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಉದ್ಯೋಗ ಆಧಾರಿತ ತರಬೇತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಎಚ್.ಸಿ.ಎಲ್. ಟೆಕ್ನಾಲಜಿರವರು ಉದ್ಯೋಗ ಆಧಾರಿತ ತರಬೇತಿ ನೀಡಲು ಟೆಕ್‌ಬೀ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದ್ದು, 2022-2023 ರಲ್ಲಿ ಪಿಯುಸಿಯಲ್ಲಿ ಉತ್ತೀರ್ಣರಾಗಿರುವ ಮತ್ತು 2024ರಲ್ಲಿ ಉತ್ತೀರ್ಣರಾಗುತ್ತಿರುವ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ.

ಆಯ್ಕೆಯಾದ ವಿದ್ಯಾರ್ಥಿಗಳಿಗೆ 12 ತಿಂಗಳ ತರಬೇತಿಯನ್ನು (6 ತಿಂಗಳ ಕ್ಲಾಸ್ ರೂಂ ತರಬೇತಿ, 6 ತಿಂಗಳ ಇಂಟರ್‌ಷಿಪ್ ) 6 ತಿಂಗಳ ಇಂಟರ್‌ಷಿಪ್ ಸಮಯದಲ್ಲಿ ಅಭ್ಯರ್ಥಿಗೆ ಸ್ಟೈಪಂಡ್ ರೂಪದಲ್ಲಿ ತಿಂಗಳಿಗೆ ರೂ.10,000 ಗಳನ್ನು ನೀಡಲಾಗುವುದು.

https://bit.lv/techbeeKSDC ಲಿಂಕ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 8722790340 / 9845454471 ಮತ್ತು ಜಿಲ್ಲೆಯ ಸಂಕಲ್ಪ ಸಂಯೋಜಕರಾದ ಶಿವಾನಂದ ಕಂಬಾರ ಮೊ.-9916185682 ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಕೊಠಡಿ ಸಂಖ್ಯೆ-106, ಜಿಲ್ಲಾಡಳಿತ ಭವನ, 1ನೇ ಮಹಡಿ ಗದಗ ಇಲ್ಲಿ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ. ಮಲ್ಲೂರ ಬಸವರಾಜ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಟಿ ಟಿವಿಯಲ್ಲಿ 'ಹಂಚಿಕೊಂಡವರು' ಪ್ರಸಾರ




■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಕಲಾವಿದರು ಪಾತ್ರ ನಿರ್ವಹಿಸಿರುವ, ಚಿನ್ಮಯ ಗಾಯಿತ್ರಿ ಕ್ರಿಯೇಷನ್ಸ್

ನಿರ್ಮಾಣದ 'ಹಂಚಿಕೊಂಡವರು' ಸಿನಿಮಾ ಸ್ಥಳೀಯ ಸಿಟಿ ಟಿವಿಯಲ್ಲಿ ಡಿ.9 ಹಾಗೂ ಡಿ.10ರಂದು ಸಂಜೆ 7 ಗಂಟೆಯಿಂದ ಪ್ರಸಾರವಾಗಲಿದೆ. ಆಸಕ್ತರು ಸಿನಿಮಾವನ್ನು ವೀಕ್ಷಿಸಲು ಕಲಾವಿದರ ತಂಡ ವಿನಂತಿಸಿದೆ.


ಕರ್ನಾಟಕ ಸರ್ಕಾರ

**ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ ಜಿಲ್ಲಾ : ಗದಗ**

ದೂ: 08372-280128 ಈ-ಮೇಲ್ ka.mulagunda.tp@gmail.com

Website : http://www.mulgundtown.mrc.gov.in

ಕ್ರ.ಸಂ/ಪ.ಪಂ.ಮು/ಕಂದಾಯ.ವಿಭಾಗ/ವಾ.ಮ.ತೇ.ಬಾ.ಕು/ವಹಿ- /2023-24 ದಿನಾಂಕ : 05/12/2023

**ಮಳಿಗೆಗಳ ಬಹಿರಂಗ ಹರಾಜು ಪ್ರಕಟಣೆ**

ಈ ಮೂಲಕ ಯಾವತ್ತು ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಗೆ ತಿಳಿಯಪಡಿಸುವದೇನೆಂದರೆ, ಪಟ್ಟಣ ಪಂಚಾಯತ ಮುಳಗುಂದ ವ್ಯಾಪ್ತಿಯಲ್ಲಿ ಬರುವ ವಿವಿಧ ಅನುದಾನದಲ್ಲಿ ನಿರ್ಮಿಸಿದ ಒಟ್ಟು 21 ಮಳಿಗೆಗಳ ಬಹಿರಂಗ ಲೀಲಾವು ಮೂಲಕ ನಡೆಸಲು ಸರ್ಕಾರದ 2019ರ ಮಾರ್ಗಸೂಚಿಯಂತೆ **ಮಾನ್ಯ ಜಿಲ್ಲಾಧಿಕಾರಿಗಳ ಗದಗ ಇವರು ಬಹಿರಂಗ ಲೀಲಾವು ಮಾಡಲು ಮಂಜೂರ ನೀಡಿದ ಆದೇಶ ಪತ್ರ:ಜಿನಕೋ/ಅಭಿವೃದ್ಧಿ/ಪ.ಪಂ.ಮು/10ನೇ ಹ.ಮಳೀಗೆ.ಹರಾಜು/ವಹಿ- /2022-23 ದಿನಾಂಕ : 02/12/2023**ರಂತೆ **12 ವರ್ಷಗಳ ಅವಧಿಗೆ** ಮಾಸಿಕ ಬಾಡಿಗೆಯನ್ನು ನಿಗದಿಪಡಿಸಿದಂತೆ ಬಹಿರಂಗ ಹರಾಜು ದಿನಾಂಕ : **22/12/2023** ರಂದು ಶುಕ್ರವಾರ ದಿವಸ ಮುಂಜಾನೆ 11:00 ಘಂಟೆಗೆ ಪಟ್ಟಣ ಪಂಚಾಯತ ಕಾರ್ಯಾಲಯದ ಮುಂಭಾಗದಲ್ಲಿ ಬಹಿರಂಗ ಲೀಲಾವು ಮಾಡಲಾಗುವುದು. ಲೀಲಾವಿನಲ್ಲಿ ಭಾಗವಹಿಸುವವರು ಈ ಕೆಳಗಿನ ನಿರ್ದೇಶನ ಪಾಲಿಸಲು ಕೋರಿದೆ.

(1) ನಿಗಧಿತ ಅರ್ಜಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಹಾಗೂ ಅರ್ಜಿ ಶುಲ್ಕ ದಿನಾಂಕ : **05/12/2023** ರಿಂದ **20/12/2023** ಸಾಮಾನ್ಯ ಅರ್ಜಿ ಶುಲ್ಕ ರೂ. **100/-** ವಿಕಲಚೇತನರು, ಮಾಜಿಸೈನಿಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಅರ್ಜಿ ಶುಲ್ಕ ರೂ. **50/-** (2) ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ : **20/12/2023** (3) ಬಹಿರಂಗ ಹರಾಜು ಮಾಡುವ ದಿನಾಂಕ : **22/12/2023** ಬಹಿರಂಗ ಹರಾಜು ಮಾಡುವ ಸ್ಥಳ ಸಮಯ ದಿನಾಂಕ : (4) ಪಟ್ಟಣ ಪಂಚಾಯತ ಕಛೇರಿಯ ಮುಂಭಾಗದಲ್ಲಿ ದಿನಾಂಕ : **22/12/2023** ಶುಕ್ರವಾರ ರಂದು ಬೆಳಿಗ್ಗೆ 11:00 ಘಂಟೆಗೆ

**ವಾರ್ಡ ನಂ.03ರಲ್ಲಿಯ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಹತ್ತಿರ 10ನೇ ಹಣಕಾಸು ಯೋಜನೆಯಡಿ ನಿರ್ಮಾಣಗೊಂಡಿರುವ ವಾಣಿಜ್ಯ ಮಳಿಗೆಗಳು.**

| ಅ ನಂ | ಮಳಿಗೆ ನಂ | ಮಳಿಗೆ ಅಳತೆ (ಚ.ಅಡಿ) | ಮೀಸಲಾತಿ ವಿವರ | ನಿಗಧಿಪಡಿಸಿದ ಮಾಸಿಕ ಬಾಡಿಗೆ ಮೊತ್ತ (ರೂ.ಗಳಲ್ಲಿ) | ನಿಗಧಿಪಡಿಸಿದ ಮರುಪಾವತಿ ಠೇವಣಿ ಮೊತ್ತ (ರೂ.ಗಳಲ್ಲಿ) | ಯಶಸ್ವಿ ಬಿಡ್ಡದಾರರ ಪಾವತಿಸುವ ಠೇವಣಿ ರಕಂ | ಷರಾ |
|---|---|---|---|---|---|---|---|
| 1 | 1 | 264 | ಸಾಮಾನ್ಯ | 10,617/- | 10,000/- | 53,623/- | ಬಹಿರಂಗ ಹರಾಜು |
| 2 | 2 | 252 | ಸಾಮಾನ್ಯ | 10,638/- | 10,000/- | 51,185/- | ಬಹಿರಂಗ ಹರಾಜು |
| 3 | 3 | 228 | ಸಾಮಾನ್ಯ | 10,681/- | 10,000/- | 46,310/- | ಬಹಿರಂಗ ಹರಾಜು |
| 4 | 4 | 199.5 | ಸಾಮಾನ್ಯ | 10,732/- | 10,000/- | 40,521/- | ಬಹಿರಂಗ ಹರಾಜು |
| 5 | 5 | 190 | ಪರಿಶಿಷ್ಟ ಜಾತಿ | 10,802/- | 10,000/- | 38,592/- | ಬಹಿರಂಗ ಹರಾಜು |
| 6 | 6 | 190 | ಪರಿಶಿಷ್ಟ ಜಾತಿ | 10,802/- | 10,000/- | 38,592/- | ಬಹಿರಂಗ ಹರಾಜು |
| 7 | 7 | 190 | ಪರಿಶಿಷ್ಟ ಜಾತಿ | 10,802/- | 10,000/- | 38,592/- | ಬಹಿರಂಗ ಹರಾಜು |
| 8 | 8 | 190 | ಪರಿಶಿಷ್ಟ ಪಂಗಡ | 10,802/- | 10,000/- | 38,592/- | ಬಹಿರಂಗ ಹರಾಜು |
| 9 | 9 | 164 | ಸಾಮಾನ್ಯ | 10,795/- | 10,000/- | 33,311/- | ಬಹಿರಂಗ ಹರಾಜು |
| 10 | 10 | 160 | ಸಾಮಾನ್ಯ | 10,802/- | 10,000/- | 32,498/- | ಬಹಿರಂಗ ಹರಾಜು |
| 11 | 11 | 164 | ಸಾಮಾನ್ಯ | 10,795/- | 10,000/- | 33,311/- | ಬಹಿರಂಗ ಹರಾಜು |
| 12 | 12 | 168 | ಸಾಮಾನ್ಯ | 10,788/- | 10,000/- | 34,123/- | ಬಹಿರಂಗ ಹರಾಜು |
| 13 | 13 | 161.5 | ಸಾಮಾನ್ಯ | 10,800/- | 10,000/- | 32,803/- | ಬಹಿರಂಗ ಹರಾಜು |

**ವಾರ್ಡ ನಂ.03ರ ಚೌಡನಪೇಟಿ ಓಣಿಯಲ್ಲಿರುವ ಐ.ಡಿ.ಎಸ್.ಎಮ್.ಟಿ ಯೋಜನೆಯಡಿ ನಿರ್ಮಾಣಗೊಂಡಿರುವ ವಾಣಿಜ್ಯ ಮಳಿಗೆಗಳು.**

| ಅ ನಂ | ಮಳಿಗೆ ನಂ | ಮಳಿಗೆ ಅಳತೆ (ಚ.ಅಡಿ) | ಮೀಸಲಾತಿ ವಿವರ | ನಿಗಧಿಪಡಿಸಿದ ಮಾಸಿಕ ಬಾಡಿಗೆ ರಕಂ | ಲೀಲಾವಿನಲ್ಲಿ ಭಾಗವಹಿಸುವವರು ತುಂಬಬೇಕಾದ ಇ.ಎಂ.ಡಿ. ಹಣ | ಯಶಸ್ವಿ ಬಿಡ್ಡದಾರರ ಪಾವತಿಸುವ ಠೇವಣಿ ರಕಂ | ಷರಾ |
|---|---|---|---|---|---|---|---|
| 1 | 1 | 147 | ಸಾಮಾನ್ಯ | 4,324/- | 10,000/- | 37,589/- | ಬಹಿರಂಗ ಹರಾಜು |
| 2 | 2 | 147 | ಸಾಮಾನ್ಯ | 4,324/- | 10,000/- | 37,589/- | ಬಹಿರಂಗ ಹರಾಜು |
| 3 | 3 | 147 | ಸಾಮಾನ್ಯ | 4,324/- | 10,000/- | 37,589/- | ಬಹಿರಂಗ ಹರಾಜು |
| 4 | 4 | 147 | ಸಾಮಾನ್ಯ | 4,324/- | 10,000/- | 37,589/- | ಬಹಿರಂಗ ಹರಾಜು |
| 5 | 5 | 147 | ಸಾಮಾನ್ಯ | 4,324/- | 10,000/- | 37,589/- | ಬಹಿರಂಗ ಹರಾಜು |
| 6 | 6 | 147 | ವಿಕಲಚೇತನ | 4,324/- | 10,000/- | 37,589/- | ನೇರವಾಗಿ ಲಾಟರಿ ಮೂಲಕ |

**ವಾರ್ಡ ನಂ.16ರ ಸಿದ್ದೇಶ್ವರ ನಗರದಲ್ಲಿ 11ನೇ ಹಣಕಾಸು ಯೋಜನೆಯಡಿ ನಿರ್ಮಾಣಗೊಂಡಿರುವ ವಾಣಿಜ್ಯ ಮಳಿಗೆಗಳು.**

| ಅ ನಂ | ಮಳಿಗೆ ನಂ | ಮಳಿಗೆ ಅಳತೆ (ಚ.ಅಡಿ) | ಮೀಸಲಾತಿ ವಿವರ | ನಿಗಧಿಪಡಿಸಿದ ಮಾಸಿಕ ಬಾಡಿಗೆ ರಕಂ | ಲೀಲಾವಿನಲ್ಲಿ ಭಾಗವಹಿಸುವವರು ತುಂಬಬೇಕಾದ ಇ.ಎಂ.ಡಿ. ಹಣ | ಯಶಸ್ವಿ ಬಿಡ್ಡದಾರರ ಪಾವತಿಸುವ ಠೇವಣಿ ರಕಂ | ಷರಾ |
|---|---|---|---|---|---|---|---|
| 1 | 1 | 141.75 | ಸಾಮಾನ್ಯ | 1,269/- | 10,000/- | 27,685/- | ಬಹಿರಂಗ ಹರಾಜು |
| 2 | 2 | 141.75 | ಸಾಮಾನ್ಯ | 1,269/- | 10,000/- | 27,685/- | ಬಹಿರಂಗ ಹರಾಜು |

**ವಿಶೇಷ ಸೂಚನೆ :** ಹರಾಜಿನ ಷರತ್ತು ಹಾಗೂ ನಿಂಬಧನೆಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಅವಧಿಯಲ್ಲಿ ಕಂದಾಯ ವಿಭಾಗಕ್ಕೆ ಸಂಪರ್ಕಿಸಿ ಪಡೆಯಬಹುದಾಗಿದೆ.

**ಸಹಿ/- (ಮಂಜುನಾಥ ಪಿ ಗುಳೇದ)**
**ಮುಖ್ಯಾಧಿಕಾರಿ,**
**ಪಟ್ಟಣ ಪಂಚಾಯತ ಮುಳಗುಂದ**

**ಸಹಿ/- (ಶ್ರೀನಿವಾಸಮೂರ್ತಿ ಕುಲಕರ್ಣಿ)**
**ಆಡಳಿತಾಧಿಕಾರಿಗಳು**
**ಪಟ್ಟಣ ಪಂಚಾಯತ ಮುಳಗುಂದ ಹಾಗೂ ತಹಶೀಲ್ದಾರ ತಾಲೂಕಾ,**
**ಕಾರ್ಯನಿರ್ವಾಹಕ ದಂಡಾಧಿಕಾರಿಗಳು, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/351/2023-24

## ಮಾನವ-ವನ್ಯಜೀವಿ ಸಂಘರ್ಷ ತಡೆಗೆ ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ



ಬೆಂಗಳೂರಿನಲ್ಲಿ 2500 ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದ್ದು, 403 ಎಕರೆ ಒತ್ತುವರಿ ತೆರವುಗೊಳಿಸಲಾಗಿದೆ. ಉಳಿದ ಒತ್ತುವರಿಯನ್ನು ತೆರವುಗೊಳಿಸುವುದಕ್ಕೆ ಸರಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ವಿಧಾನಸಭೆಯಲ್ಲಿ ಗುರುವಾರ ತಿಳಿಸಿದರು.

ಸದಸ್ಯ ಎಂ.ಸತೀಶರೆಡ್ಡಿ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಒತ್ತುವರಿ ತೆರವು ಕಾರ್ಯಕ್ಕೆ ಬೆಂಗಳೂರಿನ ಶಾಸಕರು ಸಹ ಕೈಜೋಡಿಸಬೇಕು. ಬೆಂಗಳೂರಿನಲ್ಲಿ ಈಗಾಗಲೇ 500 ಹೆಕ್ಟೇರ್ ಅರಣ್ಯ ಪ್ರದೇಶ ಕಡಿಮೆಯಾಗಿದ್ದು, ಮಾನವ-ಪ್ರಾಣಿ ಸಂಘರ್ಷ ಬೆಂಗಳೂರು ಮಹಾನಗರದಲ್ಲಿಯೂ ಕಂಡುಬರುತ್ತಿದೆ ಎಂದರು.

ಕಾಡಾನೆ ಹಾವಳಿಯನ್ನು ತಡೆಗಟ್ಟಲು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಬೆಂಗಳೂರು ಕೇಂದ್ರಸ್ಥಾನವನ್ನಾಗಿರಿಸಿ, ಬೆಂಗಳೂರು ಜಿಲ್ಲೆಗೆ ಜಿಲ್ಲಾ ಆನೆ ಕಾರ್ಯಪಡೆ ರಚಿಸಲಾಗಿದೆ. ಬೆಂಗಳೂರು ಜಿಲ್ಲೆಯ ಕಗ್ಗಲೀಪುರ, ಆನೇಕಲ್, ಯಲಹಂಕ, ಹೊಸಕೋಟೆ, ಕೆ.ಆರ್. ಪುರಂ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆಯ ಹಾವಳಿಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ ಚಿರತೆ ಕಾರ್ಯಪಡೆ ರಚಿಸಲಾಗಿದೆ. ಬೆಂಗಳೂರು ನಗರ ವಿಭಾಗದಲ್ಲಿ ಮಾನವ-ವನ್ಯಜೀವಿ ಸಂಘರ್ಷ ತಡೆಗಟ್ಟಲು ಕಗ್ಗಲೀಪುರ ವಲಯದಲ್ಲಿ ಮೂರು ಮತ್ತು ಆನೇಕಲ್ ವಲಯದಲ್ಲಿ ಮೂರು ವನ್ಯಪ್ರಾಣಿ ಹಿಮ್ಮೆಟ್ಟಿಸುವ ತಂಡಗಳನ್ನು ನಿರ್ವಹಿಸಲಾಗುತ್ತಿದೆ. ಅಲ್ಲದೆ ಕಾಡಂಚಿನ ಗ್ರಾಮಗಳಲ್ಲಿ ವನ್ಯಜೀವಿ, ಅರಣ್ಯ ರಕ್ಷಣೆ ಬಗ್ಗೆ ಸಾರ್ವಜನಿಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

### ಸ್ವ-ಸಹಾಯ ಸಂಘಗಳ ಉತ್ಪನ್ನಗಳ ವಸ್ತು ಪ್ರದರ್ಶನ, ಮಾರಾಟ ಮೇಳ ಉದ್ಘಾಟಿಸಿದ ಸಿಎಂ


# ಯುವ ಶಕ್ತಿ, ಸ್ತ್ರೀ ಶಕ್ತಿ ರಾಜ್ಯದ ಸಂಪತ್ತು

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಮಹಿಳೆಯರು ತಯಾರಿಸಿದ ವಸ್ತುಗಳಿಗೆ ಮಾರಾಟ ವ್ಯವಸ್ಥೆ ದೊರೆತಾಗ ಮಾತ್ರ ಆರ್ಥಿಕ, ಸಾಮಾಜಿಕವಾಗಿ ಶಕ್ತಿ ಪಡೆಯಲು ಸಾಧ್ಯ. ಗುಣಮಟ್ಟದ ವಸ್ತುಗಳನ್ನು ತಯಾರಿಸುವ ಶಕ್ತಿ ಉತ್ಪಾದಕರಿಗೆ ಇರಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದರು.

ಅವರು ಗುರುವಾರ ಸ್ವ-ಸಹಾಯ ಸಂಘಗಳ ಉತ್ಪನ್ನಗಳ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಮಾರಾಟ ಹೆಚ್ಚಾದರೆ ಉತ್ಪನ್ನಗಳ ಉತ್ಪಾದನೆಯೂ ಹೆಚ್ಚಾಗಲು ಸಾಧ್ಯ. ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಲಭಿಸಿ, ಅದರಿಂದ ಜೀವನ ನಡೆಯಬೇಕು. ಮಹಿಳೆಯರು ಕುಟುಂಬದ ಜವಾಬ್ದಾರಿಯನ್ನು ವಹಿಸುತ್ತಾರೆ. ಅವರು ಶ್ರಮಜೀವಿಗಳು. ಶೇ 50ರಷ್ಟಿರುವ ಮಹಳೆಯರು ಶತಮಾನಗಳಿಂದ ಅಕ್ಷರ ಸಂಸ್ಕೃತಿಯಿಂದ ವಂಚಿತರಾಗಿದ್ದರು. ಮಹಿಳೆಯರು ದೌರ್ಜನ್ಯ, ಶೋಷಣೆಗೆ ಒಳಗಾಗಿರುವ ವರ್ಗ. ಈ ವರ್ಗಕ್ಕೆ ಶಿಕ್ಷಣ ದೊರೆತು ಆರ್ಥಿಕವಾಗಿ ಸಬಲರಾಗಬೇಕು. ಶಕ್ತಿ ವೃದ್ಧಿ ಮಾಡಲು ವಸ್ತು ಪ್ರದರ್ಶನ, ಮಾರಾಟ ಮೇಳಗಳನ್ನು ಸರ್ಕಾರ ಏರ್ಪಡಿಸಿದೆ. ಉದ್ಯೋಗ ಸೃಷ್ಟಿಸಲು ಆರ್ಥಿಕ ನೆರವು, ತರಬೇತಿ, ಸ್ವಯಂ ಉದ್ಯೋಗಕ್ಕೆ ಶಕ್ತಿ ಅಗತ್ಯ ಎಂದರು.



ಗುಣಮಟ್ಟದ ವಸ್ತುಗಳನ್ನು ತಯಾರಿಸುವ ಶಕ್ತಿ ಉತ್ಪಾದಕರಿಗೆ ಇರಬೇಕು. ಸ್ಪರ್ಧಾತ್ಮಕ ಸಮಾಜದಲ್ಲಿ ನಾವೂ ನಮ್ಮ ಅಸ್ತಿತ್ವ ಕಾಪಾಡಿಕೊಳ್ಳಬೇಕು. ರಾಜ್ಯದಲ್ಲಿ 3.48 ಲಕ್ಷ ಸ್ವ-ಸಹಾಯ ಸಂಘಗಳಿವೆ. 39.30 ಲಕ್ಷ ಕುಟುಂಬಗಳು ಗ್ರಾಮೀಣ ಜೀವನೋಪಾಯಡಿಯಲ್ಲಿ ಬರುತ್ತವೆ. ನಗರ ಪ್ರದೇಶದಲ್ಲಿ 33 ಸಾವಿರ ಸ್ವ-ಸಹಾಯ ಸಂಘಗಳಲ್ಲಿ 3.96 ಲಕ್ಷ ಕುಟುಂಬಗಳು ತೊಡಗಿಸಿಕೊಂಡಿವೆ. ಇಷ್ಟೊಂದು ಸ್ವ-ಸಹಾಯ ಸಂಘಗಳಿಗೆ ಸರ್ಕಾರ ಆರ್ಥಿಕ ನೆರವು ನೀಡಿದೆ ಎಂದರು.

ಪ್ರತೀ ಸ್ವ-ಸಹಾಯ ಸಂಘಗಳಿಗೆ 1 ಲಕ್ಷ ರೂ.ಗಳ ನೆರವು ನೀಡುತ್ತದೆ. 131 ಕೋಟಿ ರೂ.ಗಳನ್ನು ವ್ಯಯ ಮಾಡಿ 12600 ಗುಂಪುಗಳಿಗೆ ಈ ವರ್ಷ ಸಹಾಯ ಮಾಡಿದೆ. ಕಳೆದ ವರ್ಷ ವ್ಯಾಪಾರ ಮೇಳದಲ್ಲಿ 3 ಕೋಟಿ ರೂ.ಗಳ ವಹಿವಾಟು ನಡೆದಿದೆ. ಮಹಿಳೆಯರನ್ನು ಸಬಲರನ್ನಾಗಿ ಮಾಡಲು ನಮ್ಮ ಸರ್ಕಾರ ಎಲ್ಲಾ ರೀತಿಯ ಸಹಾಯ ಮಾಡುತ್ತಿದೆ. ಶಕ್ತಿ ಯೋಜನೆಯಡಿ ಎಲ್ಲಾ ಮಹಿಳೆಯರಿಗೆ ಉಚಿತವಾಗಿ ಬಸ್ ಪ್ರಯಾಣವನ್ನು ನೀಡಿದ್ದು, ಮಹಿಳೆಯರು ಮನೆಗಳಿಗೆ ಸೀಮಿತವಾಗದೆ ರಾಜ್ಯದ ಮೂಲೆ ಮೂಲೆಗಳಿಗೂ ಹೋಗಬೇಕು. 100 ಕೋಟಿಗೂ ಹೆಚ್ಚು ಮಹಿಳೆಯರು ಉಚಿತವಾಗಿ ಬಸ್ಸುಗಳಲ್ಲಿ ಓಡಾಡಿದ್ದಾರೆ. ಪ್ರತಿ ದಿನ 50-60 ಲಕ್ಷ ಜನ ಮಹಿಳೆಯರು ಈ ಸೌಲಭ್ಯದ ಲಾಭ ಪಡೆದುಕೊಳ್ಳುತ್ತಿದ್ದಾರೆ ಎಂದು ವಿವರಿಸಿದರು.


ಗೃಹಲಕ್ಷ್ಮೀ ಯೋಜನೆಯಡಿ 2000 ರೂ.ಗಳನ್ನು ಪಡೆಯಲು ಈವರೆಗೆ 1.17 ಕೋಟಿ ಜನ ನೋಂದಾಯಿಸಿಕೊಂಡಿದ್ದಾರೆ. 1.14 ಲಕ್ಷ ಮಹಿಳೆಯರಿಗೆ 2000 ರೂ.ಗಳನ್ನು ನೀಡಲಾಗುತ್ತಿದೆ. 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ.

> ಮಹಿಳೆಯರು ಆರ್ಥಿಕವಾಗಿ, ಸಾಮಾಜಿಕವಾಗಿ ಸಬಲರಾಗಬೇಕು. ಅವರೂ ದೇಶದ ಜಿಡಿಪಿಗೆ ಕೊಡುಗೆಯನ್ನು ನೀಡಬೇಕು. ಮಾರುಕಟ್ಟೆಯಲ್ಲಿ ಮಹಿಳೆಯರಿಗೆ ಹೆಚ್ಚು ಲಾಭ ಸಿಗಲು ಗುಣಮಟ್ಟದ ವಸ್ತುಗಳನ್ನು ತಯಾರು ಮಾಡಬೇಕು. ಅದಕ್ಕೆ ಅಗತ್ಯವಿರುವ ತಾಂತ್ರಿಕ ಜ್ಞಾನವನ್ನು ಕೊಡುವ ಕೆಲಸವನ್ನು ಇಲಾಖೆ ಮಾಡುತ್ತದೆ. ತರಬೇತಿ ಮತ್ತು ಯುವನಿಧಿ ಎರಡೂ ಆದರೆ ಸಮಾಜದಲ್ಲಿ ಆರ್ಥಿಕ, ಸಾಮಾಜಿಕ ಬದಲಾವಣೆ ತರಲು ಸಾಧ್ಯವಾಗುತ್ತದೆ. ಯುವ ಶಕ್ತಿ, ಮಹಿಳೆಯರು ರಾಜ್ಯದ ಸಂಪತ್ತು. ಆದ್ದರಿಂದ ನಿಮಗೆ ಶಕ್ತಿ ತುಂಬುವ ಕೆಲಸ ಮಾಡುತ್ತಿದ್ದೇವೆ.
>
> – ಸಿದ್ದರಾಮಯ್ಯ.
> ಮುಖ್ಯಮಂತ್ರಿಗಳು

170 ರೂ.ಗಳನ್ನು ಪ್ರತಿಯೊಬ್ಬರಿಗೂ ಅಕ್ಕಿಗೆ ಬದಲಾಗಿ ಕೊಡುತ್ತಿದ್ದೇವೆ. ಯುವನಿಧಿ ಯೋಜನೆಯ ಪ್ರಕ್ರಿಯೆ ನಡೆಯುತ್ತಿದ್ದು, ಜನವರಿಯಲ್ಲಿ ಕೊಡಲು ಪ್ರಯತ್ನ ಮಾಡಲಾಗುತ್ತಿದೆ ಎಂದರು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಶರಣಪ್ರಕಾಶ್ ಪಾಟೀಲ್, ಶಾಸಕ ಆಸಿಫ್ ಸೇಠ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಅಪರ ಮುಖ್ಯ ಕಾರ್ಯದರ್ಶಿ ಅಭಿವೃದ್ಧಿ ಆಯುಕ್ತೆ ಶಾಲಿನಿ ರಜನೀಶ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ಪುಣೆಯಲ್ಲಿ ಗಮನ ಸೆಳೆದ ಗವಿಶಿದ್ಧಯ್ಯ ಹಳ್ಳಿಕೇರಿಮಠ




■ವಿಜಯಸಾಕ್ಷಿ ಸುದ್ದಿ, ಗದಗ

ಪುಣೆಯ ಚಿಂಚವಾಡ ಭಾಗದಲ್ಲಿರುವ ಎಲ್‌ಟ್ರೋ ಸಭಾಂಗಣದಲ್ಲಿ ಕನ್ನಡಿಗರ 'ನಮ್ಮವರ ಸಂಘ' ಕನ್ನಡ ರಾಜ್ಯೋತ್ಸವದ ಅಂಗವಾಗಿ ಏರ್ಪಡಿಸಿದ್ದ 'ನಮ್ಮವರ ಹಬ್ಬ ಕನ್ನಡಿಗರ ಹಬ್ಬ-2023'ರ ಕಾರ್ಯಕ್ರಮದಲ್ಲಿ ಮುಂಡರಗಿ ತಾಲೂಕಿನ ಜಂತಲಿ ಶಿರೂರು ಗ್ರಾಮದ ಜನಪದ ಕಲಾವಿದ ಗವಿಶಿದ್ಧಯ್ಯ ಹಳ್ಳಿಕೇರಿಮಠ ಅವರ ಜನಪದ ಹಾಡುಗಾರಿಕೆ ಹಾಸ್ಯ ಕಲಾಪ್ರದರ್ಶನ ಎಲ್ಲರ ಗಮನಸೆಳೆಯಿತು.

ಕನ್ನಡ ನಾಡಿನ ಮೂಲ ಪರಂಪರೆಯ, ಜನಪದ ಕಲೆಗಳ ಮಹತ್ವ ಸಾರಿದ ಗವಿಶಿದ್ಧಯ್ಯನವರು ತಮ್ಮ ಜನಪದ ಕಲೆಯ ಮೂಲಕ ಕನ್ನಡಾಭಿಮಾನ ತುಂಬಿದರು. ವಾವ್ ಪವರ್ ಯೋಗ ಸಂಸ್ಥಾಪಕಿ, ಕನ್ನಡತಿ ಡಾ.ಭಾಗೀರಥಿ, ಶಿವಲಿಂಗ ಡವಳೇಶ್ವರ, ಚಂದ್ರಕಾಂತ ಹಾರಕೋಡ, ನಮ್ಮವರ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಬಸವರಾಜ ಹೀರೆಮಠ, ಬಸವರಾಜ ಪಟ್ಟಣಶೆಟ್ಟಿ, ಶರತ್ ಐರಾಣಿ, ಅವಿನಾಶ ಹೊಸಮನಿ, ಮುರಗೇಶ ಗಿರಿಸಾಗರ, ಅಮಿತ್ ಇನಾಮದಾರ, ಪರಾಗ ಮುಳಗುಂದ, ಬಿಂದು ಮಾಧವ ದೇಸಾಯಿ, ಜಾನ್ಸಿರಾವ್, ನೀಲಾ ಹೀರೆಮಠ, ಮಾಲತೇಶ ಕುಲಕರ್ಣಿ ಮುಂತಾದವರು ಪಾಲ್ಗೊಂಡಿದ್ದರು.

# ಡಾ.ಅಂಬೇಡ್ಕರರ ಸ್ಮರಣೆ ನಿರಂತರವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸದೃಢ, ಸಶಕ್ತ, ಸಮಾನತೆಯ ರಾಷ್ಟ್ರ ನಿರ್ಮಾಣಕ್ಕೆ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಹಾಕಿಕೊಟ್ಟ ಪರಿಕಲ್ಪನೆ, ಚಿಂತನೆ, ವಿಚಾರಗಳು ಸೂರ್ಯ-ಚಂದ್ರರಂತೆ ಸದಾ ಬೆಳಕಾಗಿವೆ ಎಂದು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಹೇಳಿದರು.

ಅವರು ಬುಧವಾರ ಪಟ್ಟಣದ ಅಂಬೇಡ್ಕರ್ ನಗರದಲ್ಲಿ ಮಹಾಮಾನವತಾವಾದಿ ಡಾ.ಬಿ.ಆರ್. ಅಂಬೇಡ್ಕರ ಅವರ ಮಹಾಪರಿನಿರ್ವಾಣ ದಿವಸದಂದು ಅಂಬೇಡ್ಕರ ನಗರ ನಿವಾಸಿಗಳು ಮತ್ತು ಸಾರ್ವಜನಿಕರು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಡಾ.ಅಂಬೇಡ್ಕರ್‌ರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪಂಜಿನ ಮೆರವಣಿಗೆ ಚಾಲನೆ ನೀಡಿ ಮಾತನಾಡಿದರು.



ವಿಶ್ವಮಾನ್ಯ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರು ಈ ದೇಶದ ಪ್ರಗತಿಯ ಬೆಳ್ಳಿಚುಕ್ಕಿಯಾಗಿದ್ದಾರೆ. ಅವರು ಭಾರತ ದೇಶದ ಸಾಮಾಜಿಕ ವ್ಯವಸ್ಥೆಯಲ್ಲಿ ಸಮಾಜದ ಅತ್ಯಂತ ಕೆಳಸ್ಥರಕ್ಕೆ ನೂಕಲ್ಪಟ್ಟಿದ್ದ ಹಿಂದುಳಿದ ವರ್ಗದ ಜನರನ್ನು ಮೇಲ್ಪಂಕ್ತಿಗೆ ತರುವಲ್ಲಿ ಅಗ್ರಗಣ್ಯರು. ಸಮಾಜದ ಎಲ್ಲರಿಗೂ ಸಮಾನ ಸ್ಥಾನಮಾನಗಳನ್ನು ಕಲ್ಪಿಸಿ, ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಿದ ಮಹಾನ್ ಪುರುಷನ ಸ್ಮರಣೆ ಈ ಭೂಮಿ ಇರುವವರೆಗೂ ನಿರಂತರವಾಗಿರಲಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ರಾಮು ಗಡದವರ, ಫಕ್ಕಿರೇಶ ನಂದೆಣ್ಣವರ, ರಾಮು ಅಡಗಿಮನಿ, ನಾಗೇಶ ಅಮರಾಪುರ, ದೇವಪ್ಪ ನಂದೆಣ್ಣವರ, ಸೋಮಪ್ಪ ನಂದೆಣ್ಣವರ, ಮಂಜು ಹೊಗೆಸೊಪ್ಪಿನ, ಸದಾನಂದ ನಂದೆಣ್ಣವರ, ಜಗದೀಶ ಹುಲಗೆಮ್ಮನವರ, ಸಂತೋಷ ಹಾದಿಮನಿ, ಶಿವು ನಂದೆಣ್ಣವರ, ಪರಮೇಶ ನಂದೆಣ್ಣವರ, ವಿರೇಶ ಮಠಪತಿ ಇದ್ದರು.

# ಅರ್ಹ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಮೂರು ಕಡೆ ಆಶ್ರಯ ನಿವೇಶನ ಖರೀದಿಸಿ ಸಾವಿರಾರು ಫಲಾನುಭವಿಗಳಿಂದ ಅರ್ಜಿ ಸ್ವೀಕರಿಸಿದ್ದರೂ ಫಲಾನುಭವಿಗಳ ಆಯ್ಕೆ ಮಾಡದಿರುವ ಜನಪ್ರತಿನಿಧಿಗಳು, ಅಧಿಕಾರಿಗಳ ಕ್ರಮವನ್ನು ಖಂಡಿಸಿ ಗುರುವಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗ ಜಿಲ್ಲಾಧ್ಯಕ್ಷ ಬಸವರಾಜ ಹಿರೇಮನಿ ಹಾಗೂ ತಾಲೂಕಾಧ್ಯಕ್ಷ ಸುರೇಶ ಹಟ್ಟಿ ನೇತೃತ್ವದಲ್ಲಿ ಪುರಸಭೆಗೆ ಮನವಿ ಸಲ್ಲಿಸಿದರು.

ಬಸವರಾಜ ಹಿರೇಮನಿ ಮಾತನಾಡಿ, ನಿವೇಶನ ರಹಿತ, ಗುಡಿಸಲುವಾಸಿ ಬಡವರಿಗೆ ನಿವೇಶನ ಕಲ್ಪಿಸುವ ಉದ್ದೇಶದಿಂದ ನಿವೇಶನ ಖರೀದಿಸಿ ವರ್ಷಗಳೇ ಕಳೆದಿವೆ. ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ ಸಾವಿರಾರು ಫಲಾನುಭವಿಗಳಲ್ಲಿ ಕೆಲವರಿಗೆ ನಿವೇಶನದ ಹಕ್ಕುಪತ್ರ ನೀಡಿದ್ದರೂ ನಿವೇಶನ ಗುರುತಿಸಿಕೊಡುವ ಕೆಲಸವಾಗಿಲ್ಲ. ಪುರಸಭೆ ಸದಸ್ಯರು ಮತ್ತು ಆಯ್ಕೆ ಸಮಿತಿ ಅಧ್ಯಕ್ಷರುಗಳ ಹೊಂದಾಣಿಕೆ ಕೊರತೆ, ರಾಜಕಾರಣದಿಂದ ಫಲಾನುಭವಿಗಳ ಆಯ್ಕೆಯಾಗದೇ ಉಳಿದಿದೆ. ಇನ್ನಾದರೂ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸುವ ಮೂಲಕ ನಿವೇಶನ ಹಂಚಿಕೆ ಮಾಡಿ ಗೃಹ ನಿರ್ಮಾಣಕ್ಕೆ ಅನಕೂಲ ಕಲ್ಪಿಸಬೇಕು. ಈ ನಿಟ್ಟಿನಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಇಚ್ಛಾಶಕ್ತಿ, ಜವಾಬ್ದಾರಿ ತೋರಿಸಲಿ ಎಂದರು.



ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಮನವಿ ಸ್ವೀಕರಿಸಿದರು. ಈ ವೇಳೆ ಸುರೇಶ ಹಟ್ಟಿ, ದಾದಾಪೀರ ಸೊಲ್ಲಾಪುರ, ಗಣೇಶ ಹಾದಿಮನಿ, ಅಸ್ಪಾಕ್ ಬಾಗಲಕೋಟ, ಮಂಜುನಾಥ ಮುಳಗುಂದ, ಮೈಲಾರಿ ಹೆಗ್ಗಣ್ಣನವರ, ಎನ್.ಎಚ್. ಹುರಕನವರ, ಎಂ.ಜಿ. ಗುರುಮಠ, ಜೆ.ಎ. ಹಳಮನಿ, ಮಂಜು ಬಂಕಾಪುರ, ಮಹೇಶ ಸೂರಣಗಿ, ನೂರಅಹ್ಮದ ಮಕಾನದಾರ, ಮಂಜುನಾಥ ಗದ್ದಿ, ಮಲ್ಲೇಶ ಗೊಜಗೊಜಿ ಮುಂತಾದವರಿದ್ದರು.

### ಅಗಲಿದ ಪತ್ರಕರ್ತ ನಿಂಗಪ್ಪ ಮಡಿವಾಳರಗೆ ನುಡಿ ನಮನ

## ಸ್ನೇಹ ಜೀವಿಯ ಅಗಲುವಿಕೆ ನೋವಿನ ಸಂಗತಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪತ್ರಕರ್ತ ಸಮಾಜದೊಂದಿಗೆ ಹೊಂದಿಕೊಂಡು ಹೇಗೆ ಸಮಾಜಮುಖಿ ವರದಿಗಳನ್ನು ಬರೆಯಬೇಕು ಎಂಬುದಕ್ಕೆ ನಿನ್ನೆ ನಮ್ಮನ್ನಗಲಿದ ಪತ್ರಕರ್ತ ನಿಂಗಪ್ಪ ಮಡಿವಾಳರ ಅವರೇ ಸಾಕ್ಷಿ. ಅವರು ಸಹೃದಯದ, ಸೌಜನ್ಯದ ವ್ಯಕ್ತಿಯಾಗಿದ್ದರು. ಅಂತಹವರನ್ನು ಕಳೆದುಕೊಂಡು ನರೇಗಲ್ಲ ಹೋಬಳಿ ಪತ್ರಕರ್ತರ ಸಂಘವು ಬಡವಾಗಿದೆ ಎಂದು ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಹೇಳಿದರು.

ಅವರು ನರೇಗಲ್ಲ ಹೋಬಳಿ ಘಟಕದ ಪತ್ರಿಕಾ ಭವನದಲ್ಲಿ ನಡೆದ ಶ್ರದ್ಧಾಂಜಲಿ, ನುಡಿ ನಮನ ಸಭೆಯಲ್ಲಿ ಮಾತನಾಡಿದರು.

ನನ್ನ ಶಿಷ್ಯನೊಬ್ಬ ಈ ಮಟ್ಟದ ಜನಮನ್ನಣೆಯನ್ನು ಗಳಿಸುತ್ತಾನೆ ಎಂಬುದು ಖಂಡಿತ ನಮಗೆ ತಿಳಿದಿರಲಿಲ್ಲ. ಯಾರ ಮನಸ್ಸಿಗೂ ನೋವಾಗದಂತೆ ಮಾತನಾಡುತ್ತಿದ್ದ ನಿಂಗಪ್ಪ ಸೌಜನ್ಯದ ವ್ಯಕ್ತಿಯಾಗಿದ್ದರು. ಯಾರೊಂದಿಗೂ ಅನಗತ್ಯ ವಾಗ್ವಾದ ಮಾಡದೆ ಸ್ನೇಹ ಜೀವಿಯಾಗಿ ಬದುಕಿದ್ದರು. ಅವರ ಅಗಲುವಿಕೆ ನಮಗೆಲ್ಲ ತೀವ್ರ ದುಃಖವನ್ನುಂಟುಮಾಡಿದೆ ಎಂದು ಕಂಬನಿ ಮಿಡಿದರು.

> ನರೇಗಲ್ಲ ಹೋಬಳಿ ಪತ್ರಕರ್ತರ ಸಂಘದ ಅಧ್ಯಕ್ಷ ಈಶ್ವರ ಬೆಟಗೇರಿ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದರು. ನಮ್ಮೆಲ್ಲರೊಂದಿಗೆ ಅತ್ಯಂತ ಸೌಜನ್ಯದ ಮೂರ್ತಿಯಾಗಿ ನಡೆದುಕೊಳ್ಳುತ್ತಿದ್ದ ನಿಂಗಪ್ಪ ಮಡಿವಾಳರ ಹೀಗೆ ಹಠಾತ್ತನೆ ಅಗಲುತ್ತಾನೆ ಎಂದು ನಾವ್ಯಾರೂ ಎಣಿಸಿರಲಿಲ್ಲ. ಅವರ ಕುಟುಂಬಕ್ಕೆ ಆರ್ಥಿಕ ಅನುಕೂಲ ಮಾಡುವಂತೆ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಿಗೆ, ರಾಜ್ಯಾಧ್ಯಕ್ಷರಿಗೆ ಮನವಿ ಮಾಡಲಾಗಿದೆ. ನಮ್ಮ ನರೇಗಲ್ಲ ಸಂಘದ ಎಲ್ಲ ಸದಸ್ಯರೂ ಅವರ ಕುಟುಂಬಕ್ಕೆ ಸಹಾಯವಾಗಲೆಂದು 10 ಸಾವಿರ ರೂಪಾಯಿಗಳ ಕಾಣಿಕೆಯನ್ನು ಸಂಗ್ರಹಿಸಿದ್ದೇವೆ. ಯಾರಾದರೂ ಉದಾರಿಗಳು ತಮ್ಮ ಕೈಲಾದಷ್ಟು ಆರ್ಥಿಕ ಸಹಾಯವನ್ನು ನಿಂಗಪ್ಪನವರ ಕುಟುಂಬಕ್ಕೆ ನೀಡಬಹುದು ಎಂದು ಮನವಿ ಮಾಡಿದರು.

ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮಾತನಾಡಿ, ನಿಂಗಪ್ಪ ನಮ್ಮ ಕಣ್ಣಳತೆಯಲ್ಲೇ ಬೆಳೆದ ಹುಡುಗ. ಬೆಳೆದಂತೆ ಸಮಾಜದಲ್ಲಿ ಒಬ್ಬ ಜವಾಬ್ದಾರಿಯುತ ನಾಗರಿಕನಾಗಿ ರೂಪುಗೊಂಡದ್ದು ನಮಗೆಲ್ಲ ಹೆಮ್ಮೆಯನ್ನುಂಟುಮಾಡಿತ್ತು. ಇನ್ನು ಮುಂದೆ ಆತ ಜೀವನದಲ್ಲಿ ಉನ್ನತಿ ಸಾಧಿಸಬೇಕು ಎನ್ನುವ ಸಮಯದಲ್ಲಿ ವಿಧಿ ಅವನನ್ನು ಕರೆದೊಯ್ದದ್ದು ನೋವಿನ ವಿಚಾರ. ಚಿಕ್ಕ ಮಕ್ಕಳನ್ನು, ಮುಪ್ಪಿನ ತಾಯಿಯನ್ನು ತುಂಬಿದ ಕುಟುಂಬವನ್ನು ನಿಂಗಪ್ಪ ಅಗಲಿದ್ದಾನೆ. ಭಗವಂತನು ಅವರ ಕುಟುಂಬದವರಿಗೆ ನೋವನ್ನು ಭರಿಸುವ ಶಕ್ತಿಯನ್ನು ನೀಡಲಿ ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಡಿ.ಎ. ಅರವಟಗಿಮಠ, ಉಮೇಶ ನವಲಗುಂದ ಮತ್ತಿತರರು ಮಾತನಾಡಿದರು. ಸಭೆಯಲ್ಲಿ ಪತ್ರಕರ್ತರಾದ ಆದರ್ಶ ಕುಲಕರ್ಣಿ, ಮಲ್ಲಯ್ಯ ಗುಂಡಗೋಪುರಮಠ, ಗವಿಸಿದ್ದೇಶ ಗೊಡಚಪ್ಪನವರ ಮುಂತಾದವರು ಹಾಜರಿದ್ದರು. ಬೀಚಿ ಬಳಗದ ಕೋಶಾಧ್ಯಕ್ಷ ಶಿವಯೋಗಿ ಜಕ್ಕಲಿ, ಸಂಘಟನಾ ಕಾರ್ಯದರ್ಶಿಗಳಾದ ಸಿ.ಕೆ. ಕೇಸರಿ, ಭಾರತಿ ಶಿರ್ಸಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ನ್ಯಾಯಾಲಯಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ



ರಾಜ್ಯದಲ್ಲಿರುವ ಜಿಲ್ಲಾ ಮತ್ತು ತಾಲೂಕು ನ್ಯಾಯಾಲಯಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ವಿಧಾನಪರಿಷತ್‌ನ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಸ್.ಎಲ್. ಭೋಜೇಗೌಡ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಪ್ರಸಕ್ತ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ 623.96 ಕೋಟಿ ರೂ ಮೊತ್ತದಲ್ಲಿ ನ್ಯಾಯಾಲಯ ಕಟ್ಟಡ ಹಾಗೂ ನ್ಯಾಯಾಂಗ ಅಧಿಕಾರಿಗಳ ವಸತಿ ಸಮುಚ್ಚಯ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಈ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ನ್ಯಾಯಾಲಯ ಕಟ್ಟದ ಹಾಗೂ ವಸತಿಗೃಹಗಳ ನಿರ್ವಹಣೆ ಕಾಮಗಾರಿಗಳನ್ನು ಸಹ ಲೋಕೋಪಯೋಗಿ ಇಲಾಖೆ ಕಟ್ಟಡಗಳ ನಿರ್ವಹಣೆಯಡಿ ಒದಗಿಸಿದ ಅನುದಾನದಲ್ಲಿ ಕೈಗೆತ್ತಿಕೊಂಡು ಸುಸ್ಥಿತಿಯಲ್ಲಿಡಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

## ಮಕ್ಕಳಲ್ಲಿ ಪರಿಸರ ಕಾಳಜಿ ಅಗತ್ಯ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿ ಪರಿಸರ ಕಾಳಜಿ ತುಂಬಾ ಅಗತ್ಯವಾಗಿದೆ ಎಂದು ಶಿಕ್ಷಕಿ ಶೋಭಾ ಪಾಟೀಲ್ ಹೇಳಿದರು.

ಪಟ್ಟಣದ ಸರಕಾರಿ ಮಾದರಿ ಕನ್ನಡ ಹೆಣ್ಣು ಮಕ್ಕಳ ಶಾಲೆಯ ಮಕ್ಕಳನ್ನು ಪಟ್ಟಣದ ಹೊರ ವಲಯದ ತೋಟದಲ್ಲಿ ಹೊರ ಸಂಚಾರ ಕಾರ್ಯಕ್ರಮದಡಿ ವನಮಹೋತ್ಸವದ ಕುರಿತು ಮಾತನಾಡಿ, ಮಕ್ಕಳು ಪ್ರಾಥಮಿಕ ಹಂತದಲ್ಲಿ ಪರಿಸರದ ಬಗ್ಗೆ ವಿಶೇಷ ಕಾಳಜಿ ವಹಿಸುವುದರಿಂದ ಪರಿಸರ ಉಳಿಯಲು ಸಾಧ್ಯವಾಗುತ್ತದೆ. ಇಂದು ನಾವೆಲ್ಲರೂ ನೆಮ್ಮದಿಯಿಂದ ಉಸಿರಾಡಲು ಪರಿಸರವೇ ಮುಖ್ಯ ಕಾರಣವಾಗಿದ್ದು, ಪ್ರತಿಯೊಬ್ಬರಲ್ಲೂ ಪರಿಸರ ಜಾಗೃತಿ ಅತ್ಯಗತ್ಯವಾಗಿದೆ ಎಂದರು.

ಶಾಲಾ ಪ್ರಧಾನ ಗುರು ಎಸ್.ಪಿ. ಸರ್ವದೆ, ಪಿ.ಎಸ್. ಮರಿದೇವರಮಠ, ವಿ.ವಾಯ್. ನವಲೆ, ಕೆ.ಎಸ್. ಗಾಣಿಗೇರ, ಮೈತ್ರಾ ಕೊಂಡಿಕೊಪ್ಪ, ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ, ಅಡುಗೆ ಸಿಬ್ಬಂದಿಗಳಾದ ಎಸ್.ಎ. ಭಂಡಾರಿ, ರತ್ನಮ್ಮಾ ಕಾಳೆ, ಸನ್ಮತಿ, ಶಾರದಾ ಹುಬ್ಬಳ್ಳಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka